ಸಂಪುಟ : 9 ಸಂಚಿಕೆ 241 ಪುಟ : 4 ಬೆಲೆ: 3.00 ಶನಿವಾರ ನವೆಂಬರ್ 2 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 241 Pages : 4 Price : 3.00 Saturday November 2 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### 69ನೇ ಕರ್ನಾಟಕ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ಕರ್ನಾಟಕ ಸಂಭ್ರಮ-50 ಗದುಗಿನ ಇತಿಹಾಸದ ಮೈಲಿಗಲ್ಲು

■ ವಿಜಯಸಾಕ್ಷಿ ಸುದ್ದಿ, ಗದಗ

'ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು, ಬದುಕು ಬಲುಹೀನ ನಿಧಿಯು ಸದಭಿಮಾನದ ಗೂಡು' ಎಂದು ಗದುಗಿನ ಹುಯಿಲಗೋಳ ನಾರಾಯಣರಾಯರಿಂದ ರಚನೆಯಾದ ಈ ಗೀತೆಯು ಶತಮಾನೋತ್ಸವ ಆಚರಿಸುತ್ತಿದೆ. 1970ರವರೆಗೆ ಇದುವೇ ನಾಡಗೀತೆಯಾಗಿ ಗೌರವ ಪಡೆದದ್ದು ನಮ್ಮೆಲ್ಲರಿಗೆ ಹೆಮ್ಮೆ ಹಾಗೂ ಅಭಿಮಾನದ ಸಂಗತಿ ಎಂದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

> ಗದುಗಿನ ಇತಿಹಾಸದಲ್ಲಿ ಕರ್ನಾಟಕ ಸಂಭ್ರಮ-50 ಐತಿಹಾಸಿಕ ಮೈಲಿಗಲ್ಲು. ಕನ್ನಡ ಭಾಷೆಯನ್ನಾಡುವ ಕನ್ನಡಿಗರು ಒಂದೇ ರಾಜ್ಯದ ಆಳ್ವಿಕೆಯಲ್ಲಿ ಒಂದಾಗಬೇಕು ಎನ್ನುವ ಆಶಯದಂತೆ ನವಂಬರ್-1, 1956ರಂದು ಕರ್ನಾಟಕ ಏಕೀಕರಣವಾಯಿತು. ಗದುಗಿನ ಕಾಟನ್ ಸೇಲ್ ಸೊಸೈಟಿಯಲ್ಲಿ 27, 28 ಮತ್ತು 29ರ ಡಿಸೆಂಬರ್ 1961ರಲ್ಲಿ ಜರುಗಿದ 43ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಕೆ.ಜಿ. ಕುಂದಣಗಾರ ಮತ್ತು ಸ್ವಾಗತ ಸಮಿತಿಯ ಅಧ್ಯಕ್ಷರಾದ ಕೆ.ಎಚ್. ಪಾಟೀಲ ಅವರ ಆಶಯದಂತೆ ಮೈಸೂರು ರಾಜ್ಯಕ್ಕೆ ಕರ್ನಾಟಕ ರಾಜ್ಯವೆಂದು ನಾಮಕರಣವಾಗಲಿ ಎಂದು ಸಮ್ಮೇಳನದಲ್ಲಿ ನಿರ್ಣಯ ಕೈಗೊಳ್ಳಲಾಯಿತು. ನಂತರ ಹೋರಾಟದ ಫಲವಾಗಿ 1973 ನವಂಬರ್ 1ರಂದು ಮೈಸೂರು ರಾಜ್ಯ 'ಕರ್ನಾಟಕ' ಎಂದು ನಾಮಕರಣವಾಯಿತು.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.





ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತದಿಂದ ಏರ್ಪಡಿಸಲಾಗಿದ್ದ ಕನ್ನಡ ರಾಜ್ಯೋತ್ಸವದ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಅನೇಕ ಮಹನೀಯರು ನಾಡಿನ ಏಕೀಕರಣಕ್ಕಾಗಿ ಹೋರಾಡಿದ ಫಲಶ್ರುತಿಯಾಗಿ ಹಂಚಿಹೋಗಿದ್ದ ಈ ರಾಜ್ಯವು 1956ರಲ್ಲಿ ಮೈಸೂರು ರಾಜ್ಯವಾಗಿ ಉದಯವಾಯಿತು. ಭಾಷಾವಾರು ಪ್ರಾಂತ್ಯ ನಿರ್ಮಾಣವಾಗಬೇಕೆಂದು ಕರ್ನಾಟಕ ಏಕೀಕರಣ ಚಳುವಳಿಯ ಉದ್ದೇಶವಾಗಿದ್ದರಿಂದ ಮೈಸೂರು ರಾಜ್ಯವನ್ನು 1973 ನವೆಂಬರ್ 1ರಂದು ಕರ್ನಾಟಕ ರಾಜ್ಯವೆಂದು ಪುನರ್ ನಾಮಕರಣ ಮಾಡಲಾಯಿತು ಎಂದು ತಿಳಿಸಿದರು.

ನಮ್ಮ ಕನ್ನಡ ನಾಡು ಕಲೆ, ಸಾಹಿತ್ಯ, ಸಂಸ್ಕೃತಿ, ಶಿಕ್ಷಣ ಹಾಗೂ ಸಂಗೀತ ಕ್ಷೇತ್ರದ ಬೀಡು. ಇದಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರ. ಏಕೀಕರಣ ಚಳುವಳಿಯ ಅಗತ್ಯವನ್ನು ಪ್ರಬಲವಾಗಿ ಪ್ರತಿಪಾದಿಸಿದ್ದ ಕನ್ನಡದ ಕುಲಪುರೋಹಿತರಾದ ವೆಂಕಟರಾಯರು, ಅಂದಾನಪ್ಪ ದೊಡ್ಡಮೇಟಿ ಅವರನ್ನು ನಾವೆಲ್ಲ ಈ ಸಂದರ್ಭದಲ್ಲಿ ಗೌರವದಿಂದ ಸ್ಮರಿಸೋಣ ಎಂದರು.

ನಾಮಕರಣ ಕರ್ನಾಟಕ ಸಂಭ್ರಮಾಚರಣೆಯನ್ನು ಗದುಗಿನಲ್ಲಿ 1973ರ ನವಂಬರ್ 3ರಂದು ಹಂಪೆಯ ವಿರೂಪಾಕ್ಷೇಶ್ವರ ದೇವಾಲಯದಲ್ಲಿ ಪ್ರಜ್ವಲಿಸಿದ ಕನ್ನಡ ಜ್ಯೋತಿಯನ್ನು ಗದುಗಿನ ವೀರನಾರಾಯಣ ದೇವಸ್ಥಾನದಲ್ಲಿ ಸ್ವೀಕರಿಸಿದ ಅಂದಿನ ಮುಖ್ಯಮಂತ್ರಿ ದೇವರಾಜ ಅರಸ, ಮೈಸೂರಿನ ಅರಸರಾದ ಜಯಚಾಮರಾಜೇಂದ್ರ ಒಡೆಯರ ಹಾಗೂ ಅರಣ್ಯ ಮತ್ತು ಕೃಷಿ ಸಚಿವರಾದ ಕೆ.ಎಚ್. ಪಾಟೀಲ, ಪೌರಾಡಳಿತ ಸಚಿವರಾದ ಡಿ.ಕೆ. ನಾಯ್ಕರ, ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ದೇವೇಂದ್ರಪ್ಪ ಗಾಳಪ್ಪ ಹಾಗೂ ಕನ್ನಡಾಭಿಮಾನಿಗಳು ವೀರನಾರಾಯಣ ದೇವಸ್ಥಾನದಿಂದ ಕಾಟನ್ ಸೇಲ್ ಸೊಸೈಟಿಯವರೆಗೆ ಮೆರವಣಿಗೆ ಮೂಲಕ ಬಂದು ಸಾರ್ವಜನಿಕ ಸಭೆ ನಡೆಸಿ ಕರ್ನಾಟಕ ನಾಮಕರಣ ಮಹೋತ್ಸವವನ್ನು ಸಂಭ್ರಮಿಸಿದ್ದು ಇತಿಹಾಸದಲ್ಲಿ ದಾಖಲಾರ್ಹ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.




▸▸ 3ನೇ ಪುಟಕ್ಕೆ

## ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು

ದೀಪಾವಳಿ ಎಂದರೆ ನಮ್ಮ ಬದುಕಿನ ಕತ್ತಲೆಯನ್ನು ಕಳೆದು ಬೆಳಕಿನ ದಾರಿ ತೋರಿಸುವ ಸಂಭ್ರಮದ ಹಬ್ಬ. ಒಂದು ದೀಪ ತಾನು ಸುಟ್ಟುಕೊಳ್ಳುತ್ತ ಲಕ್ಷಾಂತರ ಜ್ಯೋತಿಗಳು ಬೆಳಗುತ್ತವೆ. ಅಂತಹ ಸಾರ್ಥಕ ಬದುಕಿನ ಅಂತಃಸ್ಪುರಣ ನಮ್ಮ-ನಿಮ್ಮೆಲ್ಲರಿಗೂ ಆಗಲಿ ಎಂಬ ಹಾರೈಕೆಯೊಂದಿಗೆ ನಮ್ಮ ಸಮಸ್ತ ಓದುಗರಿಗೆ, ಜಾಹೀರಾತುದಾರರಿಗೆ, ಏಜೆಂಟರಿಗೆ ಹಾಗೂ ಅಭಿಮಾನಿಗಳಿಗೆ ಬೆಳಕಿನ ಹಬ್ಬದ ಹಾರ್ದಿಕ ಶುಭಾಶಯಗಳು.

## ಇಂದು ಕಾರ್ಯಾಲಯಕ್ಕೆ ಬಿಡುವು

ಇಂದು ದೀಪಾವಳಿ ಪಾಡ್ಯ ನಿಮಿತ್ತ ನಮ್ಮ ಕಚೇರಿಗೆ ಬಿಡುವು ಇರುವುದರಿಂದ ನಾಳಿನ ಸಂಚಿಕೆ ಪ್ರಕಟವಾಗುವುದಿಲ್ಲ.

– ಸಂಪಾದಕರು

## ವಕ್ಫ್ ಮಾತ್ರವಲ್ಲ ಮುಜರಾಯಿ ಇಲಾಖೆ ಜಾಗವೂ ಕಬಳಿಕೆ: ಸಂತೋಷ್

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ವಕ್ಫ್ ಮಾತ್ರ ಅಲ್ಲ, ಮುಜರಾಯಿ ಇಲಾಖೆ ಜಾಗವೂ ಕಬಳಿಕೆ ಆಗಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದರು.

ಧಾರವಾಡದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ವಕ್ಫ್ ಮಾತ್ರ ಅಲ್ಲ, ಮುಜರಾಯಿ ಇಲಾಖೆ ಜಾಗವೂ ಕಬಳಿಕೆ ಆಗಿದೆ. ಕಂದಾಯ ಇಲಾಖೆ, ಬಿಡಿಎ ಸೈಟ್ ಗಳೂ ಕಬಳಿಕೆ ಆಗಿವೆ. ಹೀಗಾಗಿ ನೋಟಿಸ್ ಕೊಟ್ಟಿರುತ್ತಾರೆ. ಇದಕ್ಕಾಗಿಯೇ ಟ್ರಿಬ್ಯುನಲ್ ಇದೆ. ಆ ಮೂಲಕ ಎಲ್ಲವೂ ನಡೆಯುತ್ತದೆ ಎಂದರು.

ನಮ್ಮ ಸರ್ಕಾರ ಬಂದಾಗಿನಿಂದ ಯಾವ ರೈತರಿಗೂ ನೋಟಿಸ್ ಹೋಗಿಲ್ಲ. 2018ನಲ್ಲಿ ಹೋಗಿರುವ ನೋಟೀಸ್ ಅದು. ಇದು ನಮ್ಮ ಗಮನಕ್ಕೆ ಇಲ್ಲಿವರೆಗೂ ಬಂದಿರಲಿಲ್ಲ. ಈಗ ಗಮನಕ್ಕೆ ಬಂದಿದೆ. ಸೋಮವಾರ ಈ ಸಂಬಂಧ ಸಭೆ ಮಾಡಲು ಡಿಸಿಗೆ ಹೇಳಿದ್ದೇನೆ. ಸಂಬಂಧಿಸಿದವರ ಜೊತೆ ಸಭೆ ಮಾಡಿ ವರದಿ ಕೊಡಲು ಹೇಳಿದ್ದೇನೆ ಎಂದರು.

ಇನ್ನೂ ಕರ್ನಾಟಕ ಉಪಚುನಾವಣೆ ವಿಚಾರ ಸಂಬಂಧ ಪ್ರತಿಕ್ರಿಯಿಸಿದ ಸಚಿವರು, ಸಂಡೂರಿನಲ್ಲಿ ನಮ್ಮ ಪಕ್ಷದ ಅಭ್ಯರ್ಥಿ ಗೆಲುವು ನಿಶ್ಚಿತ. ಚೆನ್ನಾಗಿ ಪ್ರಚಾರ ನಡೆದಿದೆ. ಈ ಬಾರಿಯೂ ಸಂಪೂರ್ಣ ಬಹುಮತದಿಂದ ಗೆಲ್ಲುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ಜಿಲ್ಲೆಯಾದ್ಯಂತ ಬೆಳಕಿನ ರಂಗು । ಎಲ್ಲೆಡೆ ಲಕ್ಷ್ಮೀ ಪೂಜೆ, ವಾಹನ ಪೂಜೆಯ ಸಡಗರ

# ದೀಪಾವಳಿ ಆಚರಣೆಯ ಸಂಭ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಶುಕ್ರವಾರ ಬೆಳಕಿನ ಹಬ್ಬ ದೀಪಾವಳಿಯ ಸಂಭ್ರಮ ಮನೆ ಮಾಡಿತ್ತು. ಮನೆ ಮಂದಿಯೆಲ್ಲ ನೂತನ ವಸ್ತ್ರ ಧರಿಸಿದರೆ, ಮಕ್ಕಳು ಪಟಾಕಿ ಸಿಡಿಸಿ ಸಂಭ್ರಮಿಸಿದರು.

ದೀಪಾವಳಿ ಹಬ್ಬದ ಆಚರಣೆಗಾಗಿ ಬೆಳಗಿನಿಂದಲೇ ಜನರು ಸಿದ್ಧತೆಯಲ್ಲಿ ತೊಡಗಿದ್ದರು. ಅಮವಾಸ್ಯೆ ಅಂಗವಾಗಿ ನಗರದ ಪುಟ್ಟರಾಜ ಗವಾಯಿಗಳ ಆಶ್ರಮ, ಸಾಯಿಬಾಬಾ ದೇವಸ್ಥಾನ, ರಾಚೋಟೇಶ್ವರ ದೇವಸ್ಥಾನ, ಜೋಡು ಮಾರುತಿ ದೇವಸ್ಥಾನಗಳಲ್ಲಿ ಜನರು ತಮ್ಮ ವಾಹನಗಳಿಗೆ ವಿಶೇಷ ಪೂಜೆ ನೆರವೇರಿಸಿದರು.

ನರಕ ಚತುರ್ದಶಿಯಿಂದ ಬಲಿಪಾಡ್ಯಮಿವರೆಗೆ ಜಿಲ್ಲೆಯಲ್ಲಿ ದೀಪಾವಳಿ ಹಬ್ಬವನ್ನು ಆಚರಣೆ ಮಾಡಲಾಗುತ್ತಿದೆ. ಆಕಾಶ ಬುಟ್ಟಿಗಳು, ಸಾಲು ಸಾಲು ಹಣತೆಗಳು, ವರ್ಣಮಯವಾದ ವಿದ್ಯುದ್ದೀಪಗಳ ಸರಗಳು ಮನೆ, ದೇವಸ್ಥಾನ, ಅಂಗಡಿ, ವ್ಯಾಪಾರ, ವಾಣಿಜ್ಯ ಕೇಂದ್ರಗಳಲ್ಲಿ ಬೆಳಗಲಾರಂಭಿಸಿವೆ. ರಾತ್ರಿಯಿಡೀ ಸಾಲು ಸಾಲು ಹಣತೆಗಳು, ಬಾಗಿಲುಗಳ ಮುಂದೆ ತೂಗಾಡುವ ಬಣ್ಣ ಬಣ್ಣದ ಆಕಾಶಬುಟ್ಟಿಗಳು ಕಾಣಿಸುತ್ತಿವೆ.



ಜಿಲ್ಲೆಯಲ್ಲಿ ಪ್ರತಿ ಮನೆಯಲ್ಲಿ ರಾತ್ರಿ 8ಕ್ಕೆ ಮುತ್ತೈದೆಯರು ತಾಯಿ ಲಕ್ಷ್ಮೀದೇವಿ ಪೂಜೆ ನೆರವೇರಿಸಿದರು. ಮನೆ ದೇವರ ಕೋಣೆಯಲ್ಲಿ ಕಳಶ ಹಾಗೂ ಮಡಿ ನೀರು ತುಂಬಿದ್ದ ಕಂಚಿನ ತಂಬಿಗೆಯಲ್ಲಿ ತೆಂಗಿನ ಕಾಯಿಗೆ ಸೀರೆ ಉಡಿಸಿ, ವಿವಿಧ ಹೂವುಗಳಿಂದ ಲಕ್ಷ್ಮೀದೇವಿಯನ್ನು ಅಲಂಕರಿಸಿ ಭಕ್ತಿಯಿಂದ ಪೂಜಿಸಿದರು.

ದೀಪಾವಳಿ ಹಬ್ಬದ ಅಂಗವಾಗಿ ಕೆಲ ವರ್ತಕರು, ವಾಣಿಜ್ಯ ಸಂಸ್ಥೆಗಳು ಲಕ್ಷ್ಮೀಪೂಜೆ ನಿಮಿತ್ತ ಅಂಗಡಿ, ಮಳಿಗೆಗಳ ಮುಂದೆ ಶಾಮಿಯಾನ ಹಾಕಿ ಅಲಂಕರಿಸಿದ್ದರು. ವರ್ತಕರು ಈ ದಿನ ಹೊಸ ಖಾತೆ ಕಿರ್ದಿ ಪುಸ್ತಕ ಖರೀದಿಸಿ ಪೂಜೆ ಮಾಡಿದರು.

ಅವಳಿ ನಗರ ಸೇರಿದಂತೆ ಜಿಲ್ಲೆಯ ಹಲವು ಭಾಗಗಳಲ್ಲಿ ಶನಿವಾರ ಬಲಿಪಾಡ್ಯ ಆಚರಣೆ ಮಾಡಲಾಗುತ್ತದೆ. ಬಲಿಪಾಡ್ಯಮಿ ದಿನ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಾಗಿ ಹಟ್ಟಿ ಲಕ್ಕವ್ವಳ ಪೂಜೆ ನೆರವೇರಿಸುತ್ತಾರೆ. ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಮನೆ-ಅಂಗಡಿಯಲ್ಲಿ ಪ್ರತಿಷ್ಠಾಪಿಸಿರುವ ಲಕ್ಷ್ಮೀ ಪೂಜೆ ಮಾಡಿ ಸಂಭ್ರಮಿಸಿದರೆ ಗ್ರಾಮೀಣ ಪ್ರದೇಶದಲ್ಲೂ ಹೆಚ್ಚಾಗಿ ಹಟ್ಟಿ ಲಕ್ಕವ್ವಳ ಹಾಗೂ ಸಗಣಿಯಿಂದ ತಯಾರಿಸಿದ ಪಾಂಡವರ ಮೂರ್ತಿ ಇಟ್ಟು ಮನೆಯಲ್ಲಿ ಪೂಜಿಸುವ ಸಂಪ್ರದಾಯ ಇದೆ.

## ಗ್ರಾಹಕರಿಗೆ ಬೆಲೆ ಏರಿಕೆ ಬಿಸಿ

ಹಬ್ಬಕ್ಕೂ ಮುನ್ನವೇ ಸಾಧಾರಣ ದರದಲ್ಲಿ ಮಾರಾಟವಾಗಿದ್ದ ಸೇವಂತಿಗೆ, ಚೆಂಡು ಹೂ ಸೇರಿದಂತೆ ಇನ್ನಿತರೆ ಹೂವಿನ ಬೆಲೆ ಗಗನಕ್ಕೇರಿತ್ತು. ಬೆಳಗ್ಗೆಯಿಂದಲೇ ನಗರದ ಮಾರುಕಟ್ಟೆ, ಬೆಟಗೇರಿಯ ಮಾರುಕಟ್ಟೆ ಹಾಗೂ ಹಾತಲಗೇರಿ ನಾಕಾ ಸೇರಿದಂತೆ ಇನ್ನಿತರ ಪ್ರದೇಶದಲ್ಲಿ ಹೂವು ಮಾರಾಟ ಜೋರಾಗಿತ್ತು. ಜಿಲ್ಲೆಯ ವಿವಿಧ ಭಾಗಗಳಲ್ಲಿ ಬೆಲೆ ಏರಿಕೆಯಿಂದ ಗ್ರಾಹಕರ ಜೇಬಿಗೆ ಕತ್ತರಿ ಹಾಕಲಾಗಿದೆ.

### ಜಿಲ್ಲೆಯ ಅಭಿವೃದ್ಧಿಗೆ ವಿಶೇಷ ಒತ್ತು । 50.85 ಕೋಟಿ ರೂ. ಕಾಮಗಾರಿ ಪ್ರಗತಿ

# ಉದ್ಯೋಗಾವಕಾಶ ಸೃಷ್ಟಿ ನಮ್ಮ ಗುರಿ ; ಎಚ್.ಕೆ. ಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ

ಕೈಗಾರಿಕೆಗಳತ್ತ ನಮ್ಮ ಚಿತ್ತ ಕೇಂದ್ರಿಕರಣವಾಗಬೇಕಾಗಿದೆ. ಆಗ ಮಾತ್ರ ಉದ್ಯೋಗ ಅರಸಿಕೊಂಡು ವಲಸೆ ಹೋಗುವುದನ್ನು ತಪ್ಪಿಸಬಹುದು. ಮಹಿಳೆಯರ ಉದ್ಯೋಗಕ್ಕಾಗಿಯೂ ಜಿಲ್ಲೆಯಲ್ಲಿ ವಿಶೇಷ ಪ್ರಯತ್ನಗಳಾಗಬೇಕಾಗಿದೆ. ಇರುವ ನೆಲೆಯಲ್ಲಿಯೇ ಉದ್ಯೋಗಕ್ಕಾಗಿ ಅವಕಾಶ ಸೃಷ್ಟಿ ಮಾಡುವುದು ನಮ್ಮ ಗುರಿ ಎಂದು ಸಚಿವ ಎಚ್.ಕೆ. ಪಾಟೀಲ ನುಡಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತದಿಂದ ಏರ್ಪಡಿಸಲಾದ ಕನ್ನಡ ರಾಜ್ಯೋತ್ಸವದ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಮೂಲಭೂತ ಸೌಲಭ್ಯಗಳ ಸೃಷ್ಟಿ ನಮ್ಮ ಸವಾಲು. ಅವುಗಳಲ್ಲಿ ಮನೆಗಳ ನಿರ್ಮಾಣ, ಗದಗ ಜಿಲ್ಲೆ ವ್ಯವಹಾರ, ವಾಣಿಜ್ಯ, ಸಂಸ್ಕೃತಿ, ವಸ್ತು ಪ್ರದರ್ಶನಗಳ ಕೇಂದ್ರ ಸ್ಥಾನವನ್ನಾಗಿ ನಿರ್ಮಾಣ ಮಾಡುವುದು ಸೇರಿದಂತೆ ರೈತರ ಆದಾಯವನ್ನು ಇಮ್ಮಡಿ-ಮುಮ್ಮಡಿಯಾಗಿಸಿ ರೈತರನ್ನು ಶೋಷಣೆಯಿಂದ ಮುಕ್ತರನ್ನಾಗಿಸಿ ವೈಜ್ಞಾನಿಕ ಬದಲಾವಣೆಗೆ ಹೆಜ್ಜೆಯನ್ನಿರಿಸಿಬೇಕಾಗಿದೆ ಎಂದು ತಿಳಿಸಿದರು.

ಮಹಿಳೆಯರಿಗೆ ಅವರ ಸುತ್ತಲಿನ ಜಗತ್ತನ್ನು ಪರಿಚಯಿಸಿದ ಶಕ್ತಿ ಯೋಜನೆ, ಹಸಿವು ಮುಕ್ತ ಕರ್ನಾಟಕ ಮಾಡುವ ದೃಢ ಸಂಕಲ್ಪದೊಂದಿಗೆ ಅನುಷ್ಠಾನಕ್ಕೆ ಬಂದ ಅನ್ನಭಾಗ್ಯ ಯೋಜನೆ, ಸಾಮಾಜಿಕ ಪ್ರಗತಿಪರ ಅಭಿವೃದ್ಧಿಯ ಸಂಕೇತವಾದ ಗೃಹಜ್ಯೋತಿ ಯೋಜನೆ, ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಕಾರಣವಾದ ಗೃಹಲಕ್ಷ್ಮೀ ಯೋಜನೆ, ಯುವಕರಿಗೆ ನಿರುದ್ಯೋಗ ಭದ್ರತೆ ಒದಗಿಸುವ ಯುವನಿಧಿ ಯೋಜನೆಗಳು ರಾಜ್ಯದಲ್ಲಿ ಶೇ.99ರಷ್ಟು ಫಲಾನುಭವಿಗಳಿಗೆ ತಲುಪಿದ್ದು ನೆಮ್ಮದಿ ಮೂಡಿಸಿದೆ ಎಂದರು.




ಗದಗ ಜಿಲ್ಲೆಯ ಭೀಷ್ಮ ಕೆರೆ ಪ್ರವಾಸಿ ತಾಣದಲ್ಲಿ ರೂ. 62 ಲಕ್ಷಗಳ ಅಂದಾಜು ವೆಚ್ಚದಲ್ಲಿ ವರ್ಗ ಎ ಮಾದರಿಯ 'ಪ್ರವಾಸಿ ಸ್ನೇಹಿ ಸಂಕೀರ್ಣ' ನಿರ್ಮಿಸಲು ಅನುದಾನ ಬಿಡುಗಡೆ ಮಾಡಲಾಗಿದೆ. ಗದಗ ತಾಲೂಕಿನ ಸೊರಟೂರು ವಲಯದ ಕಪ್ಪತ್ತಗುಡ್ಡದ ಅರಣ್ಯ ಪ್ರದೇಶದಲ್ಲಿ ಅಂದಾಜು ರೂ. 850 ಲಕ್ಷಗಳಲ್ಲಿ 'ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್' ನಿರ್ಮಿಸಲು ಭೂಮಿಪೂಜೆ ಮಾಡಲಾಗಿದೆ. ಗದಗ ಶಹರದಲ್ಲಿ ತ್ರೀ ಸ್ಟಾರ್ ಹೋಟೆಲ್ ಕಾಮಗಾರಿಗೆ 9 ಕೋಟಿ, ಕ್ಯಾಟರಿಂಗ್ ಹಾಸ್ಪಿಟಾಲಿಟಿ ಮತ್ತು ಹೋಟೆಲ್ ಮ್ಯಾನೇಜ್‌ಮೆಂಟ್ ಸಂಸ್ಥೆ ನಿರ್ಮಾಣಕ್ಕೆ 8 ಕೋಟಿ, ಮಹಾಲಿಂಗಪುರ ಗ್ರಾಮದ ಕಪ್ಪತಗುಡ್ಡದಲ್ಲಿ ಪರಿಸರ ಪ್ರವಾಸೋದ್ಯಮ ಶಿಬಿರಕ್ಕೆ 7 ಕೋಟಿ, ಲಕ್ಕುಂಡಿ ಗ್ರಾಮದ 13 ದೇವಸ್ಥಾನದ ಪುನರುಜ್ಜೀವನ ಕಾಮಗಾರಿಗೆ 5 ಕೋಟಿ, ಬಿಂಕದಕಟ್ಟಿಯ ಮೃಗಾಲಯ ನೈಟ್ ಸಫಾರಿಗೆ 4 ಕೋಟಿ, ತಿರಂಗಾ ಪಾರ್ಕ್ ಪ್ರದರ್ಶನ ಕಾಮಗಾರಿಗೆ 3 ಕೋಟಿ, ಭೀಷ್ಮ ಕೆರೆ ಮತ್ತು ಮೃಗಾಲಯದಲ್ಲಿ ಪುಟಾಣಿ ರೈಲು ಕಾಮಗಾರಿಗೆ 3 ಕೋಟಿ, ಕೊಣ್ಣೂರ ಸಮುದಾಯ ಭವನ ನಿರ್ಮಾಣಕ್ಕೆ 1 ಕೋಟಿ, ಜಿಗಳೂರು ಕೆರೆ ಹತ್ತಿರ ಪ್ರವಾಸಿ ಉದ್ಯಾನವನ ನಿರ್ಮಾಣಕ್ಕೆ 50 ಲಕ್ಷ ರೂ ಸೇರಿದಂತೆ ಒಟ್ಟು 24 ಕಾಮಗಾರಿಗಳಿಗೆ 50.85 ಕೋಟಿ ರೂ. ಅನುದಾನ ಮಂಜೂರಾಗಿದ್ದು, ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿವೆ ಎಂದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನ ಯೋಜನೆಯಡಿ ಗದಗ-ನರಗುಂದ ಮತಕ್ಷೇತ್ರಕ್ಕೆ 53 ಕಾಮಗಾರಿಗಳಿಗೆ 11.55 ಕೋಟಿ ಅನುದಾನ ಮಂಜೂರಾಗಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 7 ಕೋಟಿ ರೂ. ವೆಚ್ಚದಲ್ಲಿ ಜಿಲ್ಲಾ ಕ್ರೀಡಾಂಗಣ ಹಾಗೂ ಒಳಾಂಗಣ ಕ್ರೀಡಾಂಗಣ ಅಭಿವೃದ್ಧಿ ಕಾಮಗಾರಿಗಳಿಗಾಗಿ ಅನುದಾನ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿವೆ. ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ವಿಶ್ವವಿದ್ಯಾಲಯದ ಆವರಣದಲ್ಲಿರುವ ಸಬರಮತಿ ಆಶ್ರಮದ ಪಕ್ಕದಲ್ಲಿ ಯುವಕರಲ್ಲಿ ಚೈತನ್ಯ ಮತ್ತು ಸ್ಫೂರ್ತಿ ತುಂಬುವ ಆಕಾಂಕ್ಷೆಯಿಂದ 39 ಅಡಿ ಎತ್ತರದ ವಿವೇಕಾನಂದರ ಕಂಚಿನ ಪ್ರತಿಮೆ ಸ್ಥಾಪನೆ ಮಾಡಲಾಗಿದೆ ಎಂದರು.

ಗದಗ ತಾಲೂಕಿನ ಕಾರವಾರ ಕೈಗಾ-ಇಳಕಲ್ ರಾಜ್ಯ ಹೆದ್ದಾರಿ 6ಕ್ಕೆ ಹೊಂದಿಕೊಂಡಿರುವ ನಾಗಾವಿ ಕ್ರಾಸ್‌ದಿಂದ ಮುಳಗುಂದ ರಸ್ತೆ 25 ಕೋಟಿ ರೂ.ಗಳಲ್ಲಿ, ನರಗುಂದ ತಾಲೂಕಿನ ಬೀಡಿ ಬೆಳವಣಕಿ ರಾಜ್ಯ ಹೆದ್ದಾರಿ 56, ಬೆಳವಣಕಿ ಕ್ರಾಸ್‌ದಿಂದ ಜಿಲ್ಲಾ ಗಡಿಯವರೆಗೆ 10 ಕೋಟಿ, ರೋಣ ತಾಲೂಕಿನ ಮುನವಳ್ಳಿ ಕೋಟುಮಚಗಿ ರಾಜ್ಯ ಹೆದ್ದಾರಿ 83ರಲ್ಲಿ ರೋಣ ಪಟ್ಟಣ ಪರಿಮಿತಿಯಿಂದ ಹೊಳೆಆಲೂರ ರಸ್ತೆಯವರೆಗೆ ರೂ. 20 ಕೋಟಿ, ಶಿರಹಟ್ಟಿ ತಾಲೂಕಿನ ಕಲ್ಕಲಾ ಶಿಗ್ಗಾಂವ ರಾಷ್ಟ್ರೀಯ ಹೆದ್ದಾರಿ ಹುಲ್ಲೂರ ಕ್ರಾಸ್‌ದಿಂದ ಸೂರಣಗಿ ಗ್ರಾಮದವರೆಗೆ 10 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಜಿಮ್ಸ್ ಕಾಮಗಾರಿಗಳಲ್ಲಿ ನೂತನ ಡಯಾಲಿಸಿಸ್ ಘಟಕ ಉದ್ಘಾಟನೆ ಮಾಡಲಾಗಿದೆ. 20 ಕೋಟಿ ರೂಪಾಯಿಗಳ 50 ಹಾಸಿಗೆಗಳ ತೀವ್ರ ನಿಗಾ ಘಟಕಕ್ಕೆ ಹಾಗೂ ಜಿಲ್ಲಾ ಸಮಗ್ರ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದೆ ಎಂದು ವಿವರಿಸಿದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರು, ಸಾರ್ವಜನಿಕರು, ಅಪಾರ ಸಂಖ್ಯೆಯ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಗಾಂಧೀ ಭಾರತ

ಬೆಳಗಾವಿಯ ಕಾಂಗ್ರೆಸ್ ಅಧಿವೇಶನಕ್ಕೆ ನೂರರ ಸಂಭ್ರಮ ಸಲುವಾಗಿ ಬೆಳಗಾವಿಯಲ್ಲಿ 1924ರಲ್ಲಿ ಮಹಾತ್ಮ ಗಾಂಧೀಜಿ ಅವರ ಅಧ್ಯಕ್ಷತೆಯಲ್ಲಿ ಕಾಂಗ್ರೆಸ್ ಅಧಿವೇಶನ ಜರುಗಿತ್ತು. ಮಹಾತ್ಮ ಗಾಂಧೀಜಿ ಅವರು ಅಧ್ಯಕ್ಷತೆ ವಹಿಸಿದ ಏಕೈಕ ಅಧಿವೇಶನ ಇದಾಗಿದೆ. ನೂರರ ಸಂಭ್ರಮದ ಸಂದರ್ಭದಲ್ಲಿ ಅದರ ನೆನಪನ್ನು ಮರುಸ್ಥಾಪಿಸಲು ಕರ್ನಾಟಕ ಸರ್ಕಾರ 'ಗಾಂಧೀ ಭಾರತ' ಹೆಸರಿನಲ್ಲಿ ರಾಜ್ಯದಾದ್ಯಂತ ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

## ಜನತಾ ದರ್ಶನ

ಜಿಲ್ಲೆಯ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಲು ಗದಗ ಜಿಲ್ಲೆಯಲ್ಲಿ ಮುಂಡರಗಿ ತಾಲ್ಲೂಕನ್ನೊಳಗೊಂಡು ಈಗಾಗಲೇ 3 ಬಾರಿ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು ಹಲವಾರು ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರಗಳನ್ನು ಘೋಷಿಸಿ ಸಾರ್ವಜನಿಕರ ಅಹವಾಲುಗಳಿಗೆ ಸೂಕ್ತ ಸ್ಪಂದನೆ ದೊರಕುವಂತೆ ಮಾಡಲಾಗಿದೆ. ಸಮಸ್ಯೆಗಳನ್ನು ಹೊತ್ತು ತಂದ ಸಾರ್ವಜನಿಕರ ಸಮಸ್ಯೆಗಳಿಗೆ ಹಾರಿಕೆ ಉತ್ತರ ನೀಡದೆ, ತಾರ್ಕಿಕ ಅಂತ್ಯ ಕೊಟ್ಟು ಒಟ್ಟು 2154 ಅರ್ಜಿಗಳಲ್ಲಿ ಕೇವಲ 4 ಅರ್ಜಿಗಳನ್ನು ಹೊರತುಪಡಿಸಿ ಉಳಿದಂತೆ ಎಲ್ಲ ಅಹವಾಲುಗಳಿಗೆ ಪರಿಹಾರ ನೀಡಲಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

## ಸಂಪಾದಕೀಯ

# ಜ್ಞಾನದ ಜ್ಯೋತಿ ಬೆಳಗೋಣ

ನಾಡಿನಲ್ಲೆಡೆ ದೀಪಾವಳಿ ಹಬ್ಬದ ಸಡಗರ ಸಂಭ್ರಮ ಮನೆ ಮಾಡಿದೆ. ಜೊತೆಗೆ ಈ ಬಾರಿ ಕನ್ನಡ ರಾಜ್ಯೋತ್ಸವ ಜೊತೆಗೂಡಿರುವುದರಿಂದ ರಾಜ್ಯದಲ್ಲೆಡೆ ಕನ್ನಡ ದೀಪಾವಳಿ ಆಚರಣೆ ಮಾಡಲಾಗುತ್ತಿದೆ.

ದೀಪಾವಳಿ ಹಬ್ಬದ ಆಚರಣೆಗೆ ಐತಿಹಾಸಿಕ ಮತ್ತು ಧಾರ್ಮಿಕ ಕಾರಣಗಳಿದ್ದರೂ, ದೀಪಾವಳಿ ಅಜ್ಞಾನದ ಕತ್ತಲೆಯನ್ನ ಕಳೆದು ಸುಜ್ಞಾನದ ಬೆಳಕನ್ನ ಹರಡುವ ಹಬ್ಬವಾಗಿದೆ. ಹೆಸರೇ ಹೇಳುವಂತೆ ದೀಪವನ್ನ ಬೆಳಗಿಸುವ ಮೂಲಕ ಕತ್ತಲೆಯನ್ನ ಕಳೆಯುವುದೇ ದೀಪಾವಳಿ ಹಬ್ಬದ ವಿಶೇಷ.

ಪುರಾಣ ಪುಣ್ಯ ಕಥೆಗಳನ್ನ ನೋಡುವುದಾದರೆ ಶ್ರೀರಾಮ, ರಾವಣನನ್ನು ಕೊಂದು ಅಯೋಧ್ಯೆಗೆ ಮರಳಿದ ದಿನ, ಅಂದು ಎಲ್ಲರೂ ದೀಪ ಹಚ್ಚಿ ಶ್ರೀರಾಮನನ್ನ ಬರಮಾಡಿಕೊಂಡ ದಿನ. ಇನ್ನೊಂದು ಕಡೆ ಪಾಂಡವರು ತಮ್ಮ ಹದಿನಾಲ್ಕು ವರ್ಷಗಳ ಅಜ್ಞಾತವಾಸವನ್ನ ಮುಗಿಸಿ ಮರಳಿದ ದಿನವೂ ಹೌದು.

ಇನ್ನು ಮುಂಗಾರು ಬೆಳೆ ಕೊಯ್ಲಿಗೆ ಬರುವ ಸಮಯದಲ್ಲಿ ಈ ಹಬ್ಬ ಬರುವುದು ವಿಶೇಷ. ಕೆಲ ಕಡೆ ಆಶ್ವಯುಜ ಮಾಸದ ಕೊನೆಯ ಎರಡು ದಿನಗಳು ಹಾಗೂ ಕಾರ್ತಿಕ ಮಾಸದ ಮೊದಲನೆಯ ದಿನ ಈ ಹಬ್ಬವನ್ನು ಆಚರಿಸಿದರೆ ಇನ್ನು ಕೆಲ ಕಡೆ ಮುಂದಿನ ಎರಡು ದಿನಗಳನ್ನು ಸೇರಿಸಿ 5 ದಿನ ವಿಜೃಂಭಣೆಯಿಂದ ಈ ಹಬ್ಬವನ್ನು ಆಚರಿಸಸುತ್ತಾರೆ.

ದೇಶಾದ್ಯಂತ ದೀಪಾವಳಿ ಹಬ್ಬವನ್ನು ಆಚರಿಸಲಾಗುತ್ತಿದ್ದರು, ಆಯಾ ಪ್ರದೇಶದಲ್ಲಿ ಭಿನ್ನ-ಭಿನ್ನವಾಗಿ ಹಬ್ಬವನ್ನು ಆಚರಿಸುತ್ತಾರೆ. ಕರ್ನಾಟಕದಲ್ಲಿ ದೀಪಾವಳಿ ಅಮವಾಸ್ಯೆಯ ದಿನ ಲಕ್ಷ್ಮಿಯನ್ನು ಪೂಜಿಸುವ ಮೂಲಕ ಆಚರಿಸಲಾಗುತ್ತದೆ.

ಒಟ್ಟಾರೆ ದೀಪಾವಳಿಯ ಆಶಯ

ಕತ್ತಲೆಯನ್ನು ಹೋಗಲಾಡಿಸಿ ಮನೆ ಹಾಗೂ ಮನದ ಕತ್ತಲೆಯನ್ನು ನಿವಾರಿಸಿ ಬೆಳಕನ್ನು ಉಂಟು ಮಾಡುವ ಹಬ್ಬವೇ ದೀಪಾವಳಿ. ಸಮಾಜದ ಅಜ್ಞಾನದ ಕತ್ತಲೆ ದೂರವಾಗಿ, ಶಾಂತಿ ನೆಮ್ಮದಿ ನೆಲೆಸುವಂತೆ ಮಾಡುವ ಬೆಳಕು ನೀಡುವ ಹಬ್ಬ ದೀಪಾವಳಿ. ಈ ದೀಪಾವಳಿ ಎಲ್ಲರ ಬದುಕಲ್ಲಿ ಜ್ಞಾನದ ದೀಪ ನಿತ್ಯ ನಿರಂತರವಾಗಿ ಹರಿಯುವಂತೆ ಮಾಡಲಿ. ಎಲ್ಲರಿಗೂ ಬೆಳಕಿನ ಹಬ್ಬದ ಶುಭಾಶಯಗಳು.

---

**ಹೂವು-ಹಣ್ಣುಗಳ ಬೇಡಿಕೆ, ಬೆಲೆ ಎರಡೂ ಹೆಚ್ಚು । ಸಂಪ್ರದಾಯ ಬಿಡಲೊಲ್ಲದ ಸಾರ್ವಜನಿಕರು**

# ಸಂಪ್ರದಾಯಬದ್ಧ ದೀಪಾವಳಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂಗಾರಿನ ಅತಿವೃಷ್ಟಿ, ಬೆಳೆಹಾನಿ ಸಂಕಷ್ಟದ ನಡುವೆಯೂ ನಾಡಿನ ದೊಡ್ಡ ಹಬ್ಬ ದೀಪಾವಳಿಯನ್ನು ಸಂಪ್ರದಾಯಬದ್ಧವಾಗಿ ಸಡಗರ ಸಂಭ್ರಮದಿಂದಲೇ ಆಚರಿಸಿದ್ದು ತಾಲೂಕಿನಾದ್ಯಂತ ಕಂಡು ಬಂದಿತು.

ಮಂಗಳವಾರದಿಂದಲೇ ಹಬ್ಬದ ಸಂಪ್ರದಾಯ ಪ್ರಾರಂಭವಾಗಿ, ಶುಕ್ರವಾರ ನರಕ ಚತುರ್ದಶಿಯಂದು ಬೆಳಿಗ್ಗೆ ಅಭ್ಯಂಜನ ಸ್ನಾನ, ಸಂಜೆ ಅಮವಾಸ್ಯೆ, ವಾಹನಪೂಜೆ, ಅಂಗಡಿ ಮುಂಗಟ್ಟುಗಲ್ಲಿ ಧನಲಕ್ಷ್ಮೀ ಪೂಜೆ ಸಲ್ಲಿಸಿದರು. ಶನಿವಾರ ದೀಪಾವಳಿ ಪಾಡ್ಯ ಆಚರಣೆಗೆ ಎಲ್ಲರ ಮನೆ ಮತ್ತು ಅಂಗಡಿಗಳಲ್ಲಿ ಧನಲಕ್ಷ್ಮೀ ಪೂಜೆ ಮತ್ತು ವಾಹನಗಳಿಗೆ ಪೂಜೆ, ಮುತ್ತೈದೆಯರಿಗೆ ಉಡಿ ತುಂಬುವ ಮತ್ತು ಹಟ್ಟಿ ಪೂಜೆಗೆ ಸಕಲ ಸಿದ್ಧತೆಯೊಂದಿಗೆ ಸಂಭ್ರಮದಲ್ಲಿದ್ದಾರೆ.



ಹಬ್ಬದ ಹಿನ್ನೆಲೆಯಲ್ಲಿ ಬಾಳೆ ಹಣ್ಣು, ಸೇಬು ಹಣ್ಣು, ದಾಳಿಂಬೆ, ತೆಂಗಿನಕಾಯಿ, ಚೆಂಡುಹೂವು, ಸೇವಂತಿಗೆ, ಮಲ್ಲಿಗೆ, ಸುಗಂಧರಾಜ ಹೂವುಗಳಿಗೆ ಬೇಡಿಕೆ ಹೆಚ್ಚಿ ಬೆಲೆಯೂ ಏರಿಕೆಯಾಗಿದ್ದರೂ ಎಲ್ಲೆಡೆ ತಳಿರು ತೋರಣ, ಹೂವು-ಹಣ್ಣು, ಅಲಂಕಾರಿಕ ವಸ್ತುಗಳು, ಆಕಾಶಬುಟ್ಟಿ, ಪಟಾಕಿ, ದಿನಸಿ, ಬಟ್ಟೆ, ಆಭರಣ, ವಾಹನಗಳ ವ್ಯಾಪಾರ-ವಹಿವಾಟು ಜೋರಾಗಿಯೇ ನಡೆಯಿತು. ಪೂಜಾ ಸಾಮಗ್ರಿಗಳು, ಪಟಾಕಿ ಖರೀದಿಗಾಗಿ ಮಾರುಕಟ್ಟೆಗೆ ಬಂದಿದ್ದ ಗ್ರಾಹಕರಿಗೆ ವಸ್ತುಗಳ ಬೆಲೆ ಏರಿಕೆ ಬಿಸಿ ತಟ್ಟಿತು.

ಮಣ್ಣಿನ ಹಣತೆಯ ಬದಲಿಗೆ ಚಿತ್ತಾಕರ್ಷಕ ಸೆರಾಮಿಕ್ ಹಣತೆಗಳು ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದವು. ಮುಂಗಾರು-ಹಿಂಗಾರಿನ ಬರದ ನಡುವೆಯೂ ದೀಪಾವಳಿ ಹಬ್ಬದ ಸಡಗರಕ್ಕೇನೂ ಕಮ್ಮಿಯಿಲ್ಲ ಎನ್ನುವಂತಹ ಹಬ್ಬದ ವಾತಾವರಣ ಮನೆ ಮಾಡಿತ್ತು.

ಸಂಜೆ ವೇಳೆ ರೈತರು ತಮ್ಮ ಕೃಷಿ ಉಪಕರಣ, ಟ್ರ್ಯಾಕ್ಟರ್, ಬೈಕ್, ಕಾರು ಸೇರಿದಂತೆ ಇತರೆ ವಾಹನಗಳಿಗೆ ತಳಿರು-ತೋರಣ ಕಟ್ಟಿ ನೆರೆಹೊರೆಯವರನ್ನು ಕರೆದು ಮುತ್ತೈದೆಯರಿಗೆ ಉಡಿ ತುಂಬಿ ಪೂಜೆ ಸಲ್ಲಿಸಿದ ದೃಶ್ಯ ಸಾಮಾನ್ಯವಾಗಿ ಕಂಡು ಬಂದಿತು.

ಹಬ್ಬದ ವ್ಯಾಪಾರಕ್ಕೆ ಪಟ್ಟಣ ಸೇರಿ ಸುತ್ತಲಿನ ನೂರಾರು ಗ್ರಾಮಗಳ ಜನರು ಬರುವುದರಿಂದ ಮುಖ್ಯ ಮಾರುಕಟ್ಟೆ ರಸ್ತೆಯಲ್ಲಿ ಟ್ರಾಫಿಕ್ ಸಮಸ್ಯೆ ಮಿತಿಮೀರಿತ್ತು. ಟ್ರಾಫಿಕ್ ಕಿರಿಕಿರಿ ತಪ್ಪಿಸುವಲ್ಲಿ ಪೊಲೀಸರು ಹರಸಾಹಸದ ನಡುವೆ ಜನಸಾಮಾನ್ಯರೂ ಪರದಾಡಬೇಕಾಯಿತು. ಟ್ರಾಫಿಕ್ ಸಮಸ್ಯೆ ನಿಯಂತ್ರಣಕ್ಕೆ ಪೊಲೀಸರು ಮತ್ತು ಪುರಸಭೆಗೆ ಸಾರ್ವಜನಿಕರು ಒತ್ತಡ ಹಾಕಿದ್ದರಿಂದ ಮುಖ್ಯ ಬಜಾರ್ ರಸ್ತೆಯ ಸೋಮೇಶ್ವರ ಪಾದಗಟ್ಟಿಯಿಂದ ಹಾವಳಿ ಆಂಜನೇಯ ದೇವಸ್ಥಾನದವರೆಗಿನ ರಸ್ತೆಯಲ್ಲಿ ಬೈಕ್ ಸೇರಿ ಕಾರ್, ಅಟೋ ಸಂಚಾರ ಸಂಪೂರ್ಣ ನಿರ್ಬಂಧಿಸಿ, ಬಾಳೆ-ಕಬ್ಬು, ತಳಿರು ತೋರಣಕ್ಕಾಗಿ ಪ್ರತ್ಯೇಕ ಸ್ಥಳ ನಿಗದಿಪಡಿಸಿದ್ದರಿಂದ ಟ್ರಾಫಿಕ್ ಸಮಸ್ಯೆಗೆ ಕಡಿವಾಣ ಹಾಕಿದಂತಾಗಿ ಜನತೆ ಮತ್ತು ವ್ಯಾಪಾರಸ್ಥರು ನಿಟ್ಟುಸಿರು ಬಿಟ್ಟರು.

---

# ಕರುನಾಡ ಸೇವೆಗೆ ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ರಾಜ್ಯೋತ್ಸವದ ಅಂಗವಾಗಿ ಶುಕ್ರವಾರ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದಿಂದ ಧ್ವಜಾರೋಹಣವನ್ನು ನೆರವೇರಿಸಲಾಯಿತು. ಗದಗ ಜಿಲ್ಲಾ ಘಟಕದ ಅಧ್ಯಕ್ಷ ವೆಂಕಟೇಶ್ ರಾಮಪ್ಪ ಬೇಲೂರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ನಾಡಿನ ಸೇವೆಗಾಗಿ



ಯುವಕರು ಮುಂದಾಗಬೇಕೆಂದು ಹೇಳಿದರು.

ರಾಜ್ಯ ಸಮಿತಿಯ ಸದಸ್ಯರಾದ ದಾವಲಸಾಬ ಮುಳಗುಂದ, ಕರವೇ ಕಾರ್ಮಿಕ ಘಟಕದ ಜಿಲ್ಲಾಧ್ಯಕ್ಷ ತಿಮ್ಮಣ್ಣ ಈರಪ್ಪ ಡೋಣಿ ಮಾತನಾಡಿದರು. ಗದಗ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ್ ಭಂಡಾರಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸಹದೇವ ಕೋಟಿ, ಗದಗ ತಾಲೂಕಾಧ್ಯಕ್ಷ ಹನುಮಂತಸಾ ಸಿದ್ದಲಿಂಗ, ಯುವ ಘಟಕದ ಅಧ್ಯಕ್ಷ ಮಣಿಕಂಠ ಭಂಡಾರಿ, ಜಿಲ್ಲಾ ಮುಖಂಡರಾದ ಮೈಲಾರಪ್ಪ ಕೋಟೆಪ್ಪನವರ, ಮಂಜುನಾಥ್ ಶಾಂತಗೇರಿ, ಮಂಜುನಾಥ್ ಬಾಗಿ, ಶಂಕರ ದಹಿಂಡಿ ಸೇರಿದಂತೆ ಪದಾಧಿಕಾರಿಗಳಿದ್ದರು.

---

**ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಸಂಘಟನೆಗಳಿಂದ ವಿಶೇಷ ಪೂಜೆ**

# ದೊಡ್ಡಮೇಟಿ ಸ್ಮಾರಕ ಅಭಿವೃದ್ಧಿಯಾಗಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕರ್ನಾಟಕ ಏಕೀಕರಣದ ರೂವಾರಿ ಅಂದಾನಪ್ಪ ದೊಡ್ಡಮೇಟಿಯವರು ಚಿತ್ರಿಸಿರುವ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ನರೇಗಲ್ಲದ ವಿವಿಧ ಸಂಘಟನೆಗಳು ಶುಕ್ರವಾರ ಪೂಜೆ ಸಲ್ಲಿಸಿ ಗೌರವ ಅರ್ಪಿಸಿದರು.

ನರೇಗಲ್ಲ ಪಟ್ಟಣ ಪಂಚಾಯಿತಿ, ಗಜೇಂದ್ರಗಡ ತಾಲೂಕಾ ಜಾನಪದ ಪರಿಷತ್, ಬೀಚಿ ಬಳಗ, ಪೇಂಟರ್ ಸಂಘ, ಕನ್ನಡಪರ ಸಂಘಟನೆಗಳವರು ನರೇಗಲ್ಲನಿಂದ ಜಕ್ಕಲಿವರೆಗೆ ಬೈಕ್ ರ್‍ಯಾಲಿ ನಡೆಸಿದರು.

ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ ಮಾತನಾಡಿ, ಕರ್ನಾಟಕದ ಜನತೆಗೆ ತೈಲ ವರ್ಣದ ಭುವನೇಶ್ವರಿ ಚಿತ್ರವನ್ನು ನೀಡಿದ ಕೀರ್ತಿ ದಿ. ಅಂದಾನಪ್ಪನವರಿಗೆ ಸಲ್ಲುತ್ತದೆ. ಅವರ ಕನಸಿನ ಕರ್ನಾಟಕ ಮಾತೆಯ ಪರಿಕಲ್ಪನೆಯ



ಚಿತ್ರವನ್ನು ಗದುಗಿನ ಕಲಾವಿದ ಸಿ.ಎನ್. ಪಾಟೀಲರು ಚಿತ್ರಿಸಿದರು. ಮುಂಬೈ ವಿಧಾನ ಸಭೆಯಲ್ಲಿ ಕನ್ನಡದಲ್ಲಿಯೇ ಮಾತನಾಡಿದ ಮೊದಲ ವ್ಯಕ್ತಿ ಅಂದಾನಪ್ಪನವರು. ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯವರು ಕಳೆದ ಒಂದು ವರ್ಷದ ಹಿಂದೆ ಭೇಟಿ ನೀಡಿ ಅಂದಾನಪ್ಪನವರ ಸ್ಮಾರಕದ ಜಾಗೆಯನ್ನು ಪರಿಶೀಲಿಸಿದ್ದಾರೆ. ಆದರೆ, ವರ್ಷ ಗತಿಸಿದರೂ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿರುವುದು ನಮಗೆಲ್ಲ ನಿರಾಸೆ ಮೂಡಿಸಿದೆ ಎಂದರು.

ಈ ಸಂದರ್ಭದಲ್ಲಿ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಮುಖ್ಯಾಧಿಕಾರಿ ಮಹೇಶ ನಿಡಶೇಷಿ, ಬಿ.ಬಿ. ಕುರಿ, ಕಳಕನಗೌಡ ಪೊಲೀಸಪಾಟೀಲ, ಚನ್ನಬಸವ ದೊಡ್ಡಮೇಟಿ, ಶೇಖಪ್ಪ ಜುಟ್ಲ, ಶೇಖಪ್ಪ ಕೆಂಗಾರ, ಈರಣ್ಣ ಗುಜಮಾಗಡಿ, ಮಹಮ್ಮದಗೌಸ್ ಹೊಸಮನಿ, ಮೈಲಾರಪ್ಪ ಚಳ್ಳಮರದ, ಸಂದೇಶ ದೊಡ್ಡಮೇಟಿ, ಹರ್ಷವರ್ಧನ್ ದೊಡ್ಡಮೇಟಿ ಬಸವರಾಜ ಮಾಳವಾಡ, ಜೆ.ಎ. ಪಾಟೀಲ, ಆರೀಫ್ ಮಿರ್ಜಾ, ಸಂಜೀವ ಗುಡಿಮನಿ ಸೇರಿದಂತೆ ಸಂಘಟನೆಗಳ ಸದಸ್ಯರಿದ್ದರು.

ಗಜೇಂದ್ರಗಡ ತಾಲೂಕಾ ಜಾನಪದ ಪರಿಷತ್ ಅಧ್ಯಕ್ಷ ಎಂ.ಕೆ. ಬೇವಿನಕಟ್ಟಿ ಮಾತನಾಡಿ, ನರೇಗಲ್ಲ ಪಟ್ಟಣದ ಎಲ್ಲ ಸಂಘಟನೆಗಳ ಪರವಾಗಿ ಪ.ಪಂ ಅಧ್ಯಕ್ಷರಿಗೆ ಹಾಗೂ ಸರ್ವ ಸದಸ್ಯರಿಗೆ ರಾಜ್ಯೋತ್ಸವದ ನಿಮಿತ್ತ 1000 ಬಾವುಟಗಳನ್ನು ಪಟ್ಟಣದಲ್ಲಿ ಆರೋಹಣ ಮಾಡಬೇಕೆಂದು ಮಾಡಿದ ಮನವಿಗೆ ಅವರು ಸ್ಪಂದಿಸಿದ್ದಕ್ಕೆ ಅಭಿನಂದನೆಗಳನ್ನು ತಿಳಿಸಿ, ದಿ. ಅಂದಾನಪ್ಪ ದೊಡ್ಡಮೇಟಿಯವರ ಪರಿಕಲ್ಪನೆಯ ತೈಲ ವರ್ಣದ ಭುವನೇಶ್ವರಿ ಚಿತ್ರವನ್ನು ರಾಜ್ಯದ ಅಧಿಕೃತ ಲಾಂಛನವನ್ನಾಗಿಸಲು ಸರ್ಕಾರವನ್ನು ಒತ್ತಾಯಿಸಿದರು.

---

# ಕನ್ನಡ ಹೋರಾಟಗಾರರನ್ನು ಸ್ಮರಿಸೋಣ



■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಕನ್ನಡ ಧ್ವಜಾರೋಹಣ ಮತ್ತು ಕನ್ನಡ ವಿಷಯದಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮವನ್ನು ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಕುಟುಂಬ ವತಿಯಿಂದ ಹಮ್ಮಿಕೊಳ್ಳಲಾಗಿತ್ತು.

ಡಾ. ಬಸವರಾಜ್ ಧಾರವಾಡ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕನ್ನಡಕ್ಕಾಗಿ ಹೋರಾಡಿದ ನಮ್ಮ ಗದುಗಿನ ಹೋರಾಟಗಾರರನ್ನು ನಾವೆಲ್ಲರೂ ನೆನಪು ಮಾಡಿಕೊಳ್ಳಬೇಕಿದೆ. ಕರವೇ ರಾಜ್ಯಾಧ್ಯಕ್ಷರಾದ ಟಿ.ಎ. ನಾರಾಯಣಗೌಡ್ರು ನೇತೃತ್ವದಲ್ಲಿ ಕನ್ನಡ ನಾಡಿಗಾಗಿ ಹಲವಾರು ಯಶಸ್ವಿ ಹೋರಾಟಗಳನ್ನು ಮಾಡಿದ್ದಾರೆ. ರಾಜ್ಯೋತ್ಸವದ ಪ್ರಯುಕ್ತ ಕಾರ್ಮಿಕರಿಗೆ, ವಿದ್ಯಾರ್ಥಿಗಳಿಗೆ, ಸಾಧಕರಿಗೆ ಸನ್ಮಾನಿಸುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದ ನೇತೃತ್ವ ವನ್ನು ಕರವೇ ಗದಗ ಜಿಲ್ಲಾ ಗೌರವಾಧ್ಯಕ್ಷ ನಿಂಗನೂರ ಎಸ್.ಮಾಲಿಪಾಟೀಲ್ ವಹಿಸಿ ಕೊಂಡಿದ್ದರು. ಹಿತೈಷಿಗಳಾದ ಡಾ. ಜಯಕುಮಾರ್ ಬ್ಯಾಳಿ ಮತ್ತು ಸಿದ್ದು ಅಂದನಗೌಡ್ರು, ಎಸ್. ಎಸ್. ಪಾಟೀಲ್, ಕರವೇ ಜಿಲ್ಲಾ ಉಪಾಧ್ಯಕ್ಷ ಮಾರುತಿ ಈಳಿಗೇರ, ವಿನಾಯಕ್ ಬದಿ, ಕರವೇ ಮಹಿಳಾ ಜಿಲ್ಲಾ ಮುಖಂಡರಾದ ರತ್ನಮ್ಮ ಯಲಬುರ್ಗಿ, ತಾಲೂಕಾ ಉಪಾಧ್ಯಕ್ಷ ದಾವಲ್‌ಸಾಬ್ ತಹಸೀಲ್ದಾರ್, ಕಾರ್ಮಿಕ ಘಟಕದ ಕಾರ್ಯದರ್ಶಿ ತೌಶಿಫ್ ಡಾಲಾಯತ್, ನಿಯಾಜ್ ಮುಳುಗುಂದ, ಶಬೀರ್‌ಸಾಬ್, ಯುವ ಮುಖಂಡರಾದ ರಾಹುಲ್ ತೆರದಾಳ್, ರಘು ಹಟ್ಟಿ, ಮಹೇಶಗೌಡ ಮಾಲಿ ಪಾಟೀಲ್, ರಾಜಶೇಖರ್ ಭೀಮನಗೌಡ ಮಾಲಿಪಾಟೀಲ್ ಮುಂತಾದವರಿದ್ದರು.

---

# ಮಹನೀಯರ ಆದರ್ಶ ಪಾಲಿಸಿ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಕನ್ನಡ ಮಾತೆ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕರ್ನಾಟಕ ಏಕೀಕರಣ ಚಳುವಳಿಯಲ್ಲಿ ಭಾಗವಹಿಸಿದ ಮಹನೀಯರ ಹೋರಾಟದ ಇತಿಹಾಸವನ್ನು ಅರಿತು ಅವರ ಆದರ್ಶ ಗುಣಗಳನ್ನು ಹಾಗೂ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಶಾಲೆಯ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ, ಶಿಕ್ಷಕಿ ಪಾರ್ವತಿ ಕಟ್ಟಿಮನಿ, ವಿದ್ಯಾರ್ಥಿಗಳಾದ ಅನುಶ್ರೀ ಹಿರೇಮಠ, ತನುಶ್ರೀ ಹಾದಿ ಹಾಗೂ ಶ್ರೇಯಾ ತಿಪ್ಪನ್ನವರ್ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ವೈಭವ್ ತಿಪ್ಪನ್ನವರ್ ಹಾಗೂ ಸಂಗಡಿಗರು, ಫಾತೀಮಾಲು ಬಾನು ಸಂಗಂಕರ್ ಹಾಗೂ ಸಂಗಡಿಗರು ಕನ್ನಡ ನಾಡು-ನುಡಿಯ ಕುರಿತು ಹಾಡಗಳನ್ನು ಹಾಡಿದರು.

ವೀಣಾ ಹುಬ್ಬಳ್ಳಿ ಸ್ವಾಗತಿಸಿದರು. ರೇಣುಕಾ ವೆಂಕಟಾಪುರ ನಿರೂಪಿಸಿದರು. ಅಂಜುಮ್ ತಹಸೀಲ್ದಾರ ವಂದಿಸಿದರು. ಈ ಸಂದರ್ಭದಲ್ಲಿ ಶಾಲೆಯ ಹಿರಿಯ ಶಿಕ್ಷಕಿಯರಾದ ಅಫೀಜಾ ಬೇಗಂ ಬಾಗಲಕೋಟೆ, ಅರ್ಚನಾ ಗಿರಿತಿಮ್ಮಣ್ಣನವರ್, ಶಿಕ್ಷಕರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಇದ್ದರು.

---

**69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ತಹಸೀಲ್ದಾರ ವಾಸುದೇವ ಎಂ.ಸ್ವಾಮಿ**

# ನಮ್ಮೆಲ್ಲರ ಜವಾಬ್ದಾರಿಗಳ ಆತ್ಮಾವಲೋಕನವಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಎಂಬುದು ಬರೀ ಭಾಷೆಯಲ್ಲ. ಅದು ಈ ನೆಲದ ಸಂಸ್ಕೃತಿ, ಸಂಸ್ಕಾರ, ಪರಂಪರೆ ಸಾರುವ ಶಕ್ತಿಯಾಗಿದೆ. ಪ್ರತಿಯೊಬ್ಬ ಕನ್ನಡಿಗರಲ್ಲೂ ಕನ್ನಡ ಭಾಷೆ, ನೆಲ, ಜಲದ ಬಗ್ಗೆ ಅಭಿಮಾನ, ಸ್ವಾಭಿಮಾನ ಅಂತರ್ಗತವಾಗಿರಬೇಕು ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

ಅವರು ಶುಕ್ರವಾರ ತಾಲೂಕಾಡಳಿತದಿಂದ ಪಟ್ಟಣದ ಉಮಾ ವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದ್ದ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

2500 ವರ್ಷಗಳ ಶ್ರೇಷ್ಠ ಇತಿಹಾಸ ಹೊಂದಿರುವ ಕನ್ನಡ ನಾಡು-ನುಡಿಯ ಶ್ರೀಮಂತಿಕೆ ವಿಶ್ವಮಾನ್ಯಗೊಳಿಸುವಲ್ಲಿ ನುಡಿಗಿಂತ ನಡೆ ಮುಖ್ಯವಾಗಿದೆ. ಕನ್ನಡ ಭಾಷೆ-ಸಂಸ್ಕೃತಿ, ನೆಲ-ಜಲದ ಸಂರಕ್ಷಣೆಯಲ್ಲಿ ನಮ್ಮೆಲ್ಲರ ಜವಾಬ್ದಾರಿಗಳ ಆತ್ಮಾವಲೋಕನವಾಗಬೇಕಿದೆ. ಕನ್ನಡ ನಮ್ಮ ಬದುಕಿನ, ಅನ್ನದ ಭಾಷೆಯಾಗಿ ನಿತ್ಯ ಜೀವನದಲ್ಲಿ ಬಳಕೆಯಾಗಬೇಕು. ಕನ್ನಡ ನಿತ್ಯೋತ್ಸವವಾಗಬೇಕು. ಶಾಲಾ ಹಂತದಲ್ಲಿಯೇ ಮಕ್ಕಳಲ್ಲಿ ಕನ್ನಡದ ಬಗ್ಗೆ ಗೌರವಾಭಿಮಾನ ಮೂಡಿಸುವಲ್ಲಿ ಪಾಲಕ, ಶಿಕ್ಷಕ ಮತ್ತು ಕನ್ನಡ ಸಂಘಟನೆಗಳ ಜವಾಬ್ದಾರಿ ಹೆಚ್ಚಿದೆ. ಗದಗ ಜಿಲ್ಲೆಗೆ ಪಂಪ, ಕುಮಾರವ್ಯಾಸ, ಹುಯಿಲಗೋಳ ನಾರಾಯಣರಾಯರಂತಹ ಕೊಡುಗೆ ಅಪಾರ.



ಕನ್ನಡದ ಅಸ್ಮಿತೆಯನ್ನು ಜಗಕೆಲ್ಲ ಬೆಳಗಿಸುವ ಸಂಕಲ್ಪ ಕನ್ನಡಿಗರದ್ದಾಗಬೇಕು ಎಂದರು.

ಕರ್ನಾಟಕ ಸ್ವಾಭಿಮಾನಿ ಸೇನೆ ಬೆಳಗಾಂವ ವಿಭಾಗದ ಮುಖ್ಯಸ್ಥ ಶರಣು ಗೋಡಿ ಮಾತನಾಡಿ, ಪತ್ರಿಯೊಂದು ನಾಗಹಬ್ಬದ ಕಾರ್ಯಕ್ರಮದಲ್ಲೂ ನಾಡಗೀತೆ ಏಕ್ ಸಾಥ್ ಸುರುಕರ್ ಬದಲಾಗಿ ಕನ್ನಡದಲ್ಲೇ ಹಾಡಲು ಎಲ್ಲರೂ ಸೇರಿ ಹೇಳಿ ಎನ್ನುವಂತಾಗಬೇಕು. ಮೊದಲು ಹಿಂದಿ ಹೇರಿಕೆಯಿಂದ ಹೊರಬರಲು ಕನ್ನಡಿಗರು ಸಂಕಲ್ಪ ಮಾಡಬೇಕು. ತುಂಗಭದ್ರಾ ನದಿಯಿಂದ ಪ್ರಾರಂಭಗೊಳ್ಳಬೇಕಿರುವ ಸಿಂಗಟಾಲೂರ, ಇಟಗಿ ಸಾಸಲವಾಡ ಏತನೀರಾವರಿ ಯೋಜನೆ ಸಾಕಾರಗೊಳಿಸಲು ಈ ಭಾಗದ ಜನಪ್ರತಿನಿಧಿಗಳು ಕಾರ್ಯೋನ್ಮುಖರಾಗಬೇಕು. ಇದರಿಂದ ನಮ್ಮ ಭಾಗದ ರೈತರ ಬವಣೆ ತಪ್ಪುತ್ತದೆ ಎಂದರು.

ಮಕ್ಕಳಿಂದ ಕನ್ನಡ ನಾಡಿನ ಮುಕುಟಮಣಿಗಳ ವೇಷಭೂಷಣ, ರೂಪಕ ಪ್ರಸ್ತುತ ಪಡಿಸಲಾಯಿತು. ನಾಗರಾಜ ಹಣಗಿ, ಎ.ಐ ಮಿಯಾನವರ, ಫಕ್ಕಿರೇಶ ಕಾಡಣ್ಣವರ, ಷಣ್ಮುಕ ಗಡ್ಡೆಣ್ಣವರ, ಅಪ್ಸಾನಾ ನದಾಫ್ ಸೇರಿ 20ಕ್ಕೂ ಹೆಚ್ಚು ಹಿರಿಯ-ಕಿರಿಯ ಕವಿಗಳಿಂದ ಸುವರ್ಣ ಕವಿಗೋಷ್ಠಿ ನಡೆಯಿತು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಮುಖ್ಯಾಧಿಕಾರಿ ಮಹೇಶ ಹಡಪದ, ಸಿಪಿಐ ನಾಗರಾಜ ಮಾಡಳ್ಳಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ ಮಾತನಾಡಿದರು. ಪಿಎಸ್‌ಐ ಈರಪ್ಪ ರಿತ್ತಿ, ಹೆಸ್ಕಾಂ ಎಇಇ ಆಂಜನಪ್ಪ, ಎಸ್.ಕೆ. ಜಲರಡ್ಡಿ, ಚಂದ್ರಶೇಖರ ನರಸಮ್ಮನವರ, ಎಂ.ಎಸ್. ಚಾಕಲಬ್ಬಿ, ಮಂಜುನಾಥ ಅಮಾಸಿ, ಬಿ.ಎಸ್. ಹಿರೇಮಠ ಸೇರಿ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು, ಮಕ್ಕಳು ಪಾಲ್ಗೊಂಡಿದ್ದರು. ಶಿಕ್ಷಕರಾದ ಉಮೇಶ ನೇಕಾರ, ಸತೀಶ ಬೋಮಲೆ, ನಾಗರಾಜ ಮಜ್ಜಿಗುಡ್ಡದ, ಎನ್.ಎ. ಮುಲ್ಲಾ ನಿರ್ವಹಿಸಿದರು.

ತಾಲೂಕಾ ಕಸಾಪ ಅಧ್ಯಕ್ಷ, ಸಾಹಿತಿ ಈಶ್ವರ ಮೆಡ್ಲೇರಿ ಉಪನ್ಯಾಸ ನೀಡಿ, ಕನ್ನಡ ನಾಡಿನ ದೇದೀಪ್ಯಮಾನವಾದ ಇತಿಹಾಸವನ್ನು ಬಾಲ್ಯದಲ್ಲಿಯೇ ಮಕ್ಕಳಲ್ಲಿ ಅರುಹಿದರೆ ಅವರ ಎದೆಯಾಂತರಾಳದಲ್ಲಿ ಕನ್ನಡದ ಬಗ್ಗೆ ಅಭಿಮಾನ, ಸ್ವಾಭಿಮಾನ, ಗರ್ವ ಮೇಳೈಸುತ್ತದೆ. ಮೌರ್ಯರು, ಶಾತವಾಹನರು, ಕದಂಬರು, ಗಂಗರು, ಬಾದಾಮಿಯ ಚಾಲುಕ್ಯರು, ಕಲ್ಯಾಣ ಚಾಲುಕ್ಯರು, ಹೊಯ್ಸಳರು, ವಿಜಯನಗರ ಸಾಮ್ರಾಜ್ಯದಿಂದ ಇಂದಿನವರೆಗೂ ಕನ್ನಡ ನೆಲ, ಜಲ, ಭಾಷೆ, ಸಂಸ್ಕೃತಿ ವಿಜಂಭಿಸುತ್ತಾ ಬಂದಿದೆ. ಕನ್ನಡ ಸಾರಸ್ವತ ಲೋಕಕ್ಕೆ ಆದಿಕವಿ ಕವಿ ಪಂಪನ ಸಾಹಿತ್ಯದ ಕ್ಷೇತ್ರ ಪುಲಿಗೆರೆಯ ತಿರುಳ್ಗನ್ನಡ ನಾಡಿನ ಕೊಡುಗೆ ಅಪಾರ. ಪುಲಿಗೆರೆ ಇತಿಹಾಸವಿಲ್ಲದೇ ಕನ್ನಡ ಸಾಹಿತ್ಯ ಅಪೂರ್ಣವೆಂದೇ ಹೇಳಬಹುದಾಗಿದ್ದು, ಕನ್ನಡದ ತವರು ನೆಲ ಪುಲಿಗೆರೆ ನಾಡಿನಲ್ಲಿ ಜನಿಸಿದ ನಾವೆಲ್ಲ ಧನ್ಯರು ಎಂದರು.

ಅನಿರ್ದಿಷ್ಟಾವಧಿ ಸತ್ಯಾಗ್ರಹಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಸಾಥ್

# ತೀವ್ರ ಸ್ವರೂಪ ಪಡೆದ ಹೋರಾಟ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಠಾಣೆ ಪಿಎಸ್ಐ ಈರಪ್ಪ ರಿತ್ತಿ ಅಮಾನತ್ತಿಗೆ ಆಗ್ರಹಿಸಿ ಗೋಸಾವಿ ಸಮಾಜ ಮತ್ತು ಶ್ರೀರಾಮ ಸೇನೆ ಸಂಘಟನೆಯವರು ಕಳೆದ 3 ದಿನಗಳಿಂದ ನಡೆಸುತ್ತಿರುವ ಅನಿರ್ಧಿಷ್ಟಾವಧಿ ಸತ್ಯಾಗ್ರಹಕ್ಕೆ ಶುಕ್ರವಾರ ಶಾಸಕ ಡಾ. ಚಂದ್ರು ಲಮಾಣಿ ಸಾಥ್ ನೀಡಿದ್ದು, ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿದೆ.

ಅ.12ರಂದು ದಸರಾ ಹಬ್ಬದ ದುರ್ಗಾದೇವಿ ಮೆರವಣಿಗೆ ದಿನ ಅನ್ಯ ಕೋಮಿನ ಯುವಕರು ಗೋಸಾವಿ ಸಮಾಜದ ಯುವಕರ ಮೇಲೆ ಹಲ್ಲೆ ಮಾಡಿದ್ದಾರೆಂದು ಗೋಸಾವಿ ಸಮಾಜದವರು ಠಾಣೆಗೆ ದೂರು ಕೊಡಲು ಹೋದಾಗ ಅವರ ಮೇಲೆಯೇ ಪಿಎಸ್ಐ ಈರಪ್ಪ ರಿತ್ತಿ ಲಾಠಿ ಪ್ರಹಾರ ಮಾಡಿದ್ದಾರೆಂದು ಆರೋಪಿಸಿ ಅ.19ರಂದು ಲಕ್ಷ್ಮೇಶ್ವರ ಬಂದ್ ಕರೆ ನೀಡಿ ಪಿಎಸ್ಐ ಅಮಾನತ್ತಿಗೆ ಆಗ್ರಹಿಸಲಾಗಿತ್ತು. ಇಷ್ಟಾಗಿಯೂ ಪಿಎಸ್ಐ ಮೇಲೆ ಯಾವುದೇ ಕ್ರಮವಾಗದ್ದರಿಂದ ಕಳೆದ 3 ದಿನಗಳಿಂದ ತಹಸೀಲ್ದಾರ ಕಚೇರಿಯ ಎದುರೇ ದೀಪಾವಳಿ ಹಬ್ಬವನ್ನೂ ಆಚರಿಸದೇ ಮತ್ತೆ ಹೋರಾಟ ಮಾಡುತ್ತಿದ್ದಾರೆ.

ಆದರೆ ಶುಕ್ರವಾರ ಸಂಜೆ ಶಾಸಕರು ಹೋರಾಟಕ್ಕೆ ಬೆಂಬಲ ನೀಡಿರುವುದು ರಾಜಕೀಯ ಸ್ವರೂಪ ಪಡೆದುಕೊಂಡಿದೆ. ಧರಣಿ ನಿರತರೊಂದಿಗೆ ಪಾಲ್ಗೊಂಡ ಸಂದರ್ಭದಲ್ಲಿ



ಮಾತನಾಡಿದ ಶಾಸಕರು, ಹಿಂದೂ-ಮುಸ್ಲಿಂ ಭಾವೈಕ್ಯತೆಯ ನೆಲದಲ್ಲಿ ಅಂದು ನಡೆದ ಸಣ್ಣ ಘಟನೆಯನ್ನು ಪಟ್ಟಣದ ಹಿರಿಯರೊಂದಿಗೆ ಚರ್ಚಿಸಿ ಬಗೆಹರಿಸಬಹುದಿತ್ತು. ಆದರೆ ನ್ಯಾಯ ಕೇಳಲು ಹೋದ ಮಹಿಳೆಯರೂ ಸೇರಿ ಹಲವರ ಮೇಲೆ ಪಿಎಸ್ಐ ಮನಸೋ ಇಚ್ಛೆ ಹಲ್ಲೆ ಮಾಡಿದ್ದರಿಂದ ಎಂಎಲ್‌ಸಿ ಪ್ರಕರಣ ದಾಖಲಾಗಿದೆ. ಸ್ವತಃ ನಾನೂ ಹಲ್ಲೆಗೊಳಗಾದವರನ್ನು ನೋಡಿ ಬಂದಿದ್ದೇನೆ. ಇದನ್ನು ವಿರೋಧಿಸಿ ಪೂರ್ವ ನಿರ್ಧಾರದಂತೆ ಶ್ರೀರಾಮಸೇನೆ ಸೇರಿ ಹಿಂದೂಪರ ಸಂಘಟನೆಯವರು ಲಕ್ಷ್ಮೇಶ್ವರ ಬಂದ್ ಕರೆ ನೀಡಿದ್ದರು.

ಈ ಸಂದರ್ಭದಲ್ಲಿ ಗದುಗಿನ ದಲಿತ ಮಿತ್ರಮೇಳದ ಅಧ್ಯಕ್ಷ ಕುಮಾರ ನಡಗೇರಿ, ಬಿಜೆಪಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ನಗರ ಘಟಕದ ಅಧ್ಯಕ್ಷ ನವೀನ ಬೆಳ್ಳಟ್ಟಿ, ಶ್ರೀರಾಮಸೇನೆ ತಾಲೂಕಾಧ್ಯಕ್ಷ ಈರಣ್ಣ ಪೂಜಾರ, ಬಸವರಾಜ ಚಕ್ರಸಾಲಿ, ಪ್ರಾಣೇಶ ವ್ಯಾಪಾರಿ, ಪ್ರವೀಣ ಕುಂಬಾರ, ಚಿನ್ನು ಹಾಳದೋಟದ, ಚಂದ್ರು ಕರ್ಜೇಕಣ್ಣವರ, ಮಂಜು ಕೋಡಳ್ಳಿ, ಬಾಳಪ್ಪ ಗೋಸಾವಿ, ಹರೀಶ ಗೋಸಾವಿ, ವೆಂಕಟೇಶ ದೊಡ್ಡಮನಿ, ಹುಲಿಗೆಪ್ಪ ವಾಲ್ಮೀಕಿ, ಮಂಜುನಾಥ ಬಡ್ಡಿವಡ್ಡರ, ಅಭಿಷೇಕ ಕುರ್ತಕೋಟಿ, ಬಸು ನವಲಿ, ಬಸವರಾಜ ಭಜಂತ್ರಿ, ಶಿವಪ್ಪ ಕಟಗಿ ಸೇರಿ ಹಲವರಿದ್ದರು.

ಹೋರಾಟವನ್ನು ಹತ್ತಿಕ್ಕಿಸುವ ಮತ್ತು ಇಂತಹ ಅಧಿಕಾರಿಯನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಪಿಎಸ್ಐ ಕುಮ್ಮಕ್ಕಿನಂತೆ ಕೆಲವೊಂದು ಸಂಘಟನೆಗಳಿಂದ ಬಂದ್‌ಗೆ ವಿರೋಧ ವ್ಯಕ್ತವಾಗುವಂತೆ ನೋಡಿಕೊಂಡಿದ್ದರು. ಅದಕ್ಕಾಗಿಯೇ 163 ಕಲಂ ಜಾರಿ ಮಾಡಲಾಗಿತ್ತು. ಘಟನೆಯ ತೀವ್ರ ಬೆಳವಣಿಗೆಗೆ ಕಾರಣರಾದ ಪಿಎಸ್ಐ ಅವರು ಪೊಲೀಸ್ ಠಾಣೆಯಲ್ಲಿ ಹುಟ್ಟುಹಬ್ಬದ ಆಚರಣೆ, ಸಣ್ಣ ಕಾರಣಗಳಿಗೂ ನ್ಯಾಯ ಕೇಳಲು ಹೋದವರ ಮೇಲೆ 107 ಕೇಸ್ ದಾಖಲು ಮಾಡುವುದು ಸೇರಿ ಇವರ ಅಧಿಕಾರ ದುರ್ಬಳಕೆಯ ಎಲ್ಲ ಮಾಹಿತಿಗಾಗಿ ಸಿಸಿ ಕ್ಯಾಮರಾದಲ್ಲಿ ಸೆರೆಯಾದ ವಿಡಿಯೋಗಳನ್ನು ಎಸ್‌ಪಿ ಕಚೇರಿಯಿಂದ ಪಡೆಯುತ್ತೇನೆ. ಗೋಸಾವಿ ಸಮಾಜ ಮತ್ತು ಶ್ರೀರಾಮ ಸೇನೆಯವರು ನಡೆಸುತ್ತಿರುವ ಹೋರಾಟಕ್ಕೆ ಸಂಪೂರ್ಣ ಬೆಂಬಲ ನೀಡುತ್ತೇವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

## ಹಲ್ಮಿಡಿ ಶಾಸನದ ಪ್ರತಿಕೃತಿ ಶಿಲಾನ್ಯಾಸ ಸ್ತಂಭ ಅನಾವರಣ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ನಿರ್ಮಿಸಿದ ಹಲ್ಮಿಡಿ ಶಾಸನದ ಪ್ರತಿಕೃತಿ ಶಿಲಾನ್ಯಾಸ ಸ್ತಂಭವನ್ನು ಶುಕ್ರವಾರ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗಣ್ಯರು ಉಪಸ್ಥಿತರಿದ್ದರು.

# ಕನ್ನಡ ನಮ್ಮ ಸಂಸ್ಕೃತಿಯಾಗಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಹಾಗೂ ಶ್ರೀ ಸಿದ್ಧೇಶ್ವರ ಪ.ಪೂ ಕಾಲೇಜಿನಲ್ಲಿ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಸಮಾರಂಭದಲ್ಲಿ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿದ ಪ್ರಾ. ಎಂ.ಎಂ. ಬುರಡಿ ಹಾಗೂ ಪ್ರಾ. ವಾಯ್.ಎಸ್. ಮತ್ತೂರ ಮಾತನಾಡಿ, ಕನ್ನಡ ಭಾಷೆಯು ಕೇವಲ ಭಾಷೆಯಾಗಿರದೇ ನಮ್ಮ ಬದುಕಿನ ಸಂಸ್ಕೃತಿ ಮತ್ತು ಮೌಲ್ಯಗಳೊಂದಿಗೆ ಬೆಸೆದುಕೊಂಡಿದೆ ಎಂದರು.

ಸಮಾರಂಭದಲ್ಲಿ ಭಾಗವಹಿಸಿದ ಪ್ರೊ. ಕವಿತಾ ಚಿಕ್ಕನರಗುಂದ ಮಾತನಾಡಿ, ಕರ್ನಾಟಕ ಏಕೀಕರಣದ ಚಳುವಳಿಯ ಇತಿಹಾಸ ತಿಳಿಸುತ್ತಾ, ಏಕೀಕರಣದ ನಂತರ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ ಸಾಹಿತಿಗಳನ್ನು ಸ್ಮರಿಸಿದರು.

ನಯನಾ ಅಳವಂಡಿ ನಾಡಗೀತೆ ಹಾಗೂ ರಾಷ್ಟ್ರಗೀತೆ ಹಾಡಿದರು. ಸಮಾರಂಭದಲ್ಲಿ ಎರಡೂ ಮಹಾವಿದ್ಯಾಲಯಗಳ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪ್ರೊ. ಕೆ.ಎಸ್. ಮಲ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಸಂಭ್ರಮದ ಕನ್ನಡ ರಾಜ್ಯೋತ್ಸವ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದಲ್ಲಿ ಚಿರಾಗ್ ಎಜುಕೇಶನಲ್ ರೂರಲ್ ಡೆವಲಪ್ಮೆಂಟ್ ಟ್ರಸ್ಟ್, ಉದಯ ಪೂರ್ವ ಹಾಗೂ ಪ್ರಾಥಮಿಕ ಶಾಲೆಯಲ್ಲಿ ಸಂಭ್ರಮದಿಂದ 69ನೇ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಗ್ರಾಮದ ಶ್ರೀ ಬೀರಲಿಂಗೇಶ್ವರ ದೇವಸ್ಥಾನದಿಂದ ತಾಯಿ ಭುವನೇಶ್ವರಿಯ ಭಾವಚಿತ್ರದ ಭವ್ಯ ಮೆರವಣಿಗೆಗೆ ಸಂಸ್ಥೆಯ ಅಧ್ಯಕ್ಷರಾದ ಮುಮ್ತಾಜ್ ಬೇಗಂ ಶಿರಕೋಳ, ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಬಾಳಪ್ಪ ಗಂಗರಾತ್ರಿ ಹಾಗೂ ಬಾಬರ್ ಶಿರಕೋಳ ಪೂಜೆ ಸಲ್ಲಿಸುವುದರ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಶಾಲಾ ಮಕ್ಕಳು ಪ್ರಧಾನ ಗುರುಗಳಾದ ರೇಣುಕಾ ಅಬ್ಬಿಗೇರಿ ಹಾಗೂ ಶಿಕ್ಷಕರು ಪಾಲ್ಗೊಂಡಿದ್ದರು.

## ಕನ್ನಡದಲ್ಲಿ ವ್ಯವಹರಿಸಲು ಹಿಂಜರಿಕೆ ಬೇಡ



■ವಿಜಯಸಾಕ್ಷಿ ಸುದ್ದಿ, ಡಂಬಳ

ಕನ್ನಡ ನಮ್ಮ ತಾಯಿ ಭಾಷೆಯಾಗಿದ್ದು, ಇದರ ಗಟ್ಟಿತನ ಬೆಳೆಸುವದರೊಂದಿಗೆ ಉಳಿಸುವ ಕಾರ್ಯ ಮಾಡಬೇಕು ಎಂದು ಅಂಗನವಾಡಿ ಕಾರ್ಯಕರ್ತೆ ಸುಶೀಲಾ ಚಲವಾದಿ ಹೇಳಿದರು.

ಡಂಬಳ ಗ್ರಾಮದ 10ನೇ ಅಂಗನವಾಡಿ ಕೇಂದ್ರದಲ್ಲಿ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ನಾವು ಕನ್ನಡದಲ್ಲಿ ವ್ಯವಹಾರ ಮಾಡಲು ಹಿಂಜರಿಕೆ ಪಡಬಾರದು. ನಮ್ಮ ಕನ್ನಡ ಭಾಷೆಯನ್ನು ಉಳಿಸಿ ಬೆಳಸುವ ಕಾರ್ಯ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಮಾಜಿ ಅಧ್ಯಕ್ಷೆ ಸತ್ಯಮ್ಮ ಒಂಟಲಭೋವಿ, ಮಾಜಿ ಸೈನಿಕ ರಾಘವೇಂದ್ರ ಹಡಪದ, ಮಳ್ಳಪ್ಪ ಒಂಟಲಭೋವಿ, ಮುರ್ತುಜಾ ತಾಂಬೋಟಿ, ರಿಯಾಜ ಕಾಸ್ತಾರ, ದೇವಪ್ಪ ಆದಮ್ಮನವರ, ಮಹಿಳೆಯರು, ಅಂಗನವಾಡಿ ಸಹಾಯಕಿ ಸಿದ್ದಮ್ಮ ಭನ್ನಿಕೊಪ್ಪ, ಮಕ್ಕಳು ಇದ್ದರು.


# ವಿವಿಧೆಡೆ ಸಂಭ್ರಮದ ಕನ್ನಡ ರಾಜ್ಯೋತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ವಿವಿಧ ಸಂಘ-ಸಂಸ್ಥೆಗಳು, ಶಾಲಾ ಕಾಲೇಜಿನಲ್ಲಿ 69ನೇ ಕರ್ನಾಟಕ ರಾಜ್ಯೋತ್ಸವವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಗ್ರಾಮ ಪಂಚಾಯಿತಿಯಲ್ಲಿ ಭುವನೇಶ್ವರಿ ಭಾವಚಿತ್ರಕ್ಕೆ ಹೂಮಾಲೆ ಹಾಕಿ ಪೂಜೆ ಸಲ್ಲಿಸಿ ನಮಿಸಲಾಯಿತು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸರ್ವ ಸದಸ್ಯರು, ಪಿ.ಡಿ.ಒ ರಾಜಕುಮಾರ ಭಜಂತ್ರಿ, ಎಸ್.ಡಿ.ಎ ತುಕಾರಾಮ ಹುಲಗಣ್ಣವರ ಸೇರಿದಂತೆ ಸಿಬ್ಬಂದಿಗಳು ಹಾಜರಿದ್ದರು.



ಬಾಲಕಿಯರ ಸರಕಾರಿ ಪ್ರೌಢಶಾಲೆ, ಸರಕಾರಿ ಪ್ರಾಥಮಿಕ ಕನ್ನಡ ಗಂಡುಮಕ್ಕಳ ಶಾಲೆ, ಸರಕಾರಿ ಪ್ರಾಥಮಿಕ ಹಿರಿಯ ಹೆಣ್ಣುಮಕ್ಕಳ ಶಾಲೆ, ಸರಕಾರಿ ಉರ್ದು ಪ್ರಾಥಮಿಕ ಶಾಲೆ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಸರಕಾರಿ ಹಿರಿಯ ಡಿ.ಪಿ.ಇ.ಪಿ ಹಿರಿಯ ಪ್ರಾಥಮಿಕ ಶಾಲೆ ಮಾರುತಿ ನಗರ, ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆ, ಬಿ.ಎಚ್. ಪಾಟೀಲ ಸಂಯುಕ್ತ ಪದವಿಪೂರ್ವ ಕಾಲೇಜು ಮತ್ತು ಪ್ರೌಢಶಾಲೆ, ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಕನ್ನಡ ನಾಡು, ನುಡಿ ಕುರಿತು ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಕರ್ನಾಟಕ ಸಂಭ್ರಮ-50 ಗದುಗಿನ ಇತಿಹಾಸದ ಮೈಲಿಗಲ್ಲು

▶▶ಮೊದಲನೇ ಪುಟದಿಂದ

ಸಾಹಿತ್ಯ ಕ್ಷೇತ್ರವನ್ನು ಶ್ರೀಮಂತಗೊಳಿಸಿದ ರನ್ನ, ಸವಡಿಯ 1ನೇ ನಾಗವರ್ಮ, ಚಿಕ್ಕಹಂದಿಗೋಳದ ಶಾಸನಕವಿ ಮಲ್ಲ, ದುರ್ಗಸಿಂಹ, ಕುಮಾರವ್ಯಾಸ, ಚಾಮರಸ, ನಯಸೇನ, ಪುಲಿಗೆರೆಯ ಸೋಮನಾಥ, ಮುಕ್ತಾಯಕ್ಕ ಒಂದಡೆಯಾದರೆ ಇನ್ನೊಂದೆಡೆ ನಮ್ಮ ಸಾಹಿತ್ಯ ಕ್ಷೇತ್ರದ ಶ್ರೀಮಂತಿಕೆಯ ಕಿರೀಟಕ್ಕೆ ಗರಿಯನ್ನು ಮೂಡಿಸಿದವರು ಹುಯಿಗೋಳ ನಾರಾಯಣರಾಯರು, ಡಾ. ಎಂ.ಎಸ್. ಸುಂಕಾಪುರ, ಪ್ರೊ. ಕೀರ್ತಿನಾಥ ಕುರ್ತಕೋಟಿ, ಡಾ. ಚನ್ನವೀರ ಕಣವಿ, ಡಾ. ಗಿರಡ್ಡಿ ಗೋವಿಂದರಾಜ, ಡಾ. ಎನ್.ಕೆ. ಕುಲಕರ್ಣಿ, ಮಾಧವ ಕುಲಕರ್ಣಿ, ಡಾ. ಎಚ್. ಎನ್. ಹೂಗಾರ, ಡಾ. ರಾಜಶೇಖರ ಭೂಸನೂರಮಠ, ಹಿಂದೂಸ್ತಾನಿ ಗಾಯಕ, ಭಾರತರತ್ನ ಪುರಸ್ಕೃತ ಪಂಡಿತ ಭೀಮಸೇನ ಜೋಶಿಯವರು, ಸಂಗೀತ ದಿಗ್ಗಜರಾದ ಪಂಚಾಕ್ಷರಿ ಗವಾಯಿಗಳು ಮತ್ತು ವಿಕಲಚೇತನರ ಬಾಳಿನ ಬೆಳಕಾದ ಡಾ. ಪುಟ್ಟರಾಜ ಕವಿಗವಾಯಿಗಳು, ಕನ್ನಡದ ಜಗದ್ಗುರುಗಳೆಂದೇ ಮನೆಮಾತಾದ ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು, ಪತ್ರಿಕಾರಂಗದ ದಿಗ್ಗಜರಾದ ಪ.ಲೋ. ಬಂಕಾಪುರ, ಜೀವನ, ಪಂಢರಿನಾಥ ಗಲಗಲಿ, ಹ.ರಾ. ಕಿದಿಯೂರ, ಎಚ್.ಎಸ್. ಹೊಂಬಾಳಿ, ಕೌತಾಳ ವೀರಪ್ಪ, ಆರ್.ಕೆ. ಜಮಾದಾರ ಮೊದಲಾದವರು ಸ್ಮರಣೀಯರು ಎಂದು ನುಡಿದರು.

1973 ನವಂಬರ್ 1, 2 ಮತ್ತು 3ರಂದು ಜರುಗಿದ ಕರ್ನಾಟಕ ನಾಮಕರಣ ಮಹೋತ್ಸವವನ್ನು ಮರುಸೃಷ್ಟಿಸಿ, 2023ರ ನವಂಬರ್ 1, 2 ಮತ್ತು 3ರಂದು ಮೂರು ದಿನಗಳ ಕಾಲ ಗದುಗಿನಲ್ಲಿ ಗತವೈಭವ ಮರುಕಳಿಸುವ ಐತಿಹಾಸಿಕ ಕಾರ್ಯಕ್ರಮಕ್ಕೆ ತಾವೆಲ್ಲ ಸಾಕ್ಷಿಯಾಗಿದ್ದೀರಿ.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸೇರಿದಂತೆ ಸಚಿವ ಸಂಪುಟದ 20ಕ್ಕೂ ಹೆಚ್ಚು ಸಚಿವರು, ಕನ್ನಡಾಭಿಮಾನಿಗಳು ಕರ್ನಾಟಕ ಸಂಭ್ರಮ-50ರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನಾಮಕರಣ ಮಹೋತ್ಸವದ ಇತಿಹಾಸವನ್ನು ಮೆಲುಕು ಹಾಕಿದರು. ಇಂದು 'ಕರ್ನಾಟಕ ಸಂಭ್ರಮ-50' ಒಂದು ವರ್ಷದ ಸಂಭ್ರಮಾಚರಣೆಯ ಸಮಾರೋಪ ಸಮಾರಂಭವಾಗಿದ್ದು, ಕನ್ನಡ ನಾಡು-ನುಡಿಯ ಅಭಿಮಾನ ಬೆಳೆಸಲು ಕರ್ನಾಟಕ ರಾಜ್ಯೋತ್ಸವದ ಈ ಸಂದರ್ಭ ಔಚಿತ್ಯಪೂರ್ಣವಾಗಿದೆ ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಅಪಾರ ಸಂಖ್ಯೆಯಲ್ಲಿ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರೈತರು, ಸಾರ್ವಜನಿಕರಲ್ಲಿ ಆತಂಕ ಮೂಡಿಸಿದ ಆಸ್ತಿ ಹೆಸರು ಬದಲಾವಣೆ

# ಗರಡಿಮನೆ ಆಸ್ತಿಯಲ್ಲಿ ವಕ್ಫ್ ಹೆಸರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದ ರೈತರ ಮತ್ತು ಇತರೆ ಕೆಲವು ಆಸ್ತಿಗಳ ಮೇಲೆ ವಕ್ಫ್ ಬೋರ್ಡ್ ಹೆಸರು ದಾಖಲಾಗಿರುವ ಹಿನ್ನಲೆಯಲ್ಲಿ ರಾಜ್ಯದೆಲ್ಲೆಡೆ ಆತಂಕ ಸೃಷ್ಟಿಯಾಗಿದ್ದು, ರೈತರ ಉಳುಮೆ ಮಾಡುವ ಭೂಮಿಗಳ ಮೇಲೆ ವಕ್ಫ್ ಹೆಸರು ದಾಖಲಾಗಿರುವದು ಸುದ್ದಿಯಾಗುತ್ತಿದ್ದಂತೆ ಇದೀಗ ಲಕ್ಷ್ಮೇಶ್ವರದ ಶತಮಾನ ಕಂಡಿರುವ ಪ್ರಸಿದ್ಧ ಗರಡಿಮನೆ ಈಗ ವಕ್ಫ್ ಆಸ್ತಿಯಾಗಿ ಪರಿವರ್ತನೆಯಾಗಿರುವ ಆತಂಕದಲ್ಲಿ ಪೈಲ್ವಾನರು ಇದ್ದು, ಆಸ್ತಿಯಲ್ಲಿ ವಕ್ಫ್ ಹೆಸರು ದಾಖಲಾಗಿರುವದರಿಂದ ಆಸ್ತಿ ಉಳಿಸಿಕೊಳ್ಳಲು ನ್ಯಾಯಾಲಯದ ಮೆಟ್ಟಿಲು ಹತ್ತಿದ್ದಾರೆ.



ಸಾರ್ವಜನಿಕ ಗರಡಿಮನೆಯ ಆಸ್ತಿಯಲ್ಲಿ ಸರ್ವಧರ್ಮ ಒಳಗೊಂಡ ಕಮಿಟಿ ಇದ್ದು, ಈ ಪುರಾತನ ಆಸ್ತಿಯನ್ನು ಉಳಿಸಿಕೊಳ್ಳಲು ಕಳೆದ ನಾಲ್ಕೈದು ವರ್ಷಗಳಿಂದ ಕಾನೂನು ಹೋರಾಟವನ್ನು ಮಾಡುತ್ತಿದ್ದಾರೆ. ವಕ್ಫ್ ಆಸ್ತಿ ಎಂದು ನಮೂದಾಗಿರುವುದರಿಂದ ಅಭಿವೃದ್ಧಿಗೆ ಅಡ್ಡಿಯಾಗಿದೆ ಎನ್ನುತ್ತಾರೆ ಸಾರ್ವಜನಿಕ ಗರಡಿಮನೆ ಪಂಚರಾದ ಮಹದೇವಪ್ಪ ಕಟ್ಟಿಮನಿ, ಅನಿಲ ಮುಳಗುಂದ.

ಪಟ್ಟಣದ ಪುರಸಭೆ ಹತ್ತಿರ ಇರುವ ಸಾರ್ವಜನಿಕರ ಗರಡಿಮನೆಯಲ್ಲಿ ಅನೇಕ ಹೆಸರಾಂತ ಪೈಲ್ವಾನರು ಆಡಿ ಹೋಗಿದ್ದಾರೆ. ಆದರೆ ಗರಡಿಮನೆ ಇತ್ತೀಚೆಗೆ ಪಾಳು ಬಿದ್ದಿದ್ದು, ಗರಡಿಮನೆಯ ಅಭಿವೃದ್ಧಿಗೂ ಅಡ್ಡಿಯಾಗಿದೆ.

ಸಾರ್ವಜನಿಕ ಗರಡಿಮನೆ ಎಂದು ಇರುವ ಆಸ್ತಿಯ ಹೆಸರು ವಕ್ಫ್ ಆಸ್ತಿ ಎಂದು ಬದಲಾಗಿದ್ದು, 23 ಡಿಸೆಂಬರ್ 2019ಕ್ಕೆ ಜಿಲ್ಲಾ ವಕ್ಫ್ ಅಧಿಕಾರಿಗಳು ಪತ್ರದ ವರದಿ ಪ್ರಕಾರ ಹಿಂದಿನ ಹೆಸರು ಕಡಿಮೆ ಮಾಡಿ ವಕ್ಫ್ ಆಸ್ತಿ ಎಂದು ಹೆಸರು ದಾಖಲು ಮಾಡಿದ್ದಾರೆ. ಸಿ.ಟಿ. ಸರ್ವೇ ನಂ. 4065 ಸಾರ್ವಜನಿಕ ಗರಡಿಮನೆ ಎಂದು 2019ರವರೆಗೂ ದಾಖಲಾಗಿತ್ತು. ಇದೀಗ ವಕ್ಫ್ ಆಸ್ತಿ ಎಂದು ಹೆಸರು ಬದಲಾವಣೆಯಾಗಿದ್ದರಿಂದ ನ್ಯಾಯಾಲಯದ ಮೆಟ್ಟಿಲೇರುವ ಚಿತಾಗಿದೆ. ಗರಡಿಮನೆ ಅಭಿವೃದ್ಧಿಪಡಿಸಲು ಮುಂದಾದಾಗ ಆಸ್ತಿ ಹೆಸರು ಬದಲಾವಣೆಯಾಗಿದ್ದು ಬೆಳಕಿಗೆ ಬಂದಿದೆ.

ಅದೇ ರೀತಿ ಪಟ್ಟಣದ ಕೆಲವು ರೈತರ ಉಳುಮೆ ಮಾಡುವ ಜಮೀನುಗಳ ಮೇಲೆಯೂ ಸಹ ವಕ್ಫ್ ಬೋರ್ಡ್ ಹೆಸರು ದಾಖಲಾಗಿದೆ. ಲಕ್ಷ್ಮೇಶ್ವರ ತಾಲೂಕಿನಾದ್ಯಂತ ನೂರಾರು ಎಕರೆ ಭೂಮಿಯ ಮೇಲೆ ವಕ್ಫ್ ಮಂಡಳಿ ಹೆಸರು ದಾಖಲಾಗಿರುವದು ಇದೀಗ ಬೆಳಕಿಗೆ ಬರುತ್ತಿದ್ದು, ರೈತರು, ಸಾರ್ವಜನಿಕರು ಉತಾರ ಪಡೆಯಲು ಮುಂದಾಗುತ್ತಿದ್ದಾರೆ.

## ಏಕೀಕರಣದ ಕಲಿಗಳನ್ನು ಸ್ಮರಿಸೋಣ



■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಭಾಷೆಗೆ ಸುದೀರ್ಘವಾದ ಇತಿಹಾಸವಿದೆ. ಕರ್ನಾಟಕದ ಏಕೀಕರಣಕ್ಕಾಗಿ ಹೋರಾಡಿದ ಮಹನೀಯರನ್ನು ಸ್ಮರಿಸುವುದು, ಅವರನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಡಾ. ಉಮೇಶ ವೀ.ಪುರದ ನುಡಿದರು.

ಪುರದ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್‌ನಲ್ಲಿ ಜರುಗಿದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಕನ್ನಡ ನಾಡು-ನುಡಿ, ಸಂಸ್ಕೃತಿ, ಸಾಹಿತ್ಯ, ಸಂಗೀತ ಮುಂತಾದ ಕಲೆಗಳನ್ನು ಸಂರಕ್ಷಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಡಾ. ಶಂಭು ಪುರದ ಮಾತನಾಡಿ, ಕನ್ನಡದ ಗ್ರಂಥಗಳನ್ನು, ಪತ್ರಿಕೆಗಳನ್ನು, ಲೇಖನಗಳನ್ನು ಓದಬೇಕು. ಜೊತೆಗೆ ಭಾಷೆಯ ಕುರಿತಾಗಿ ಆಳವಾಗಿ ಅಧ್ಯಯನ ಮಾಡಿದಾಗ ನಮ್ಮ ಶಬ್ದ ಭಂಡಾರ ಹೆಚ್ಚಾಗುತ್ತದೆ. ತನ್ಮೂಲಕ ಯುವಜನತೆ ಭಾಷಾ ಸಂಪತ್ತನ್ನು ವರ್ಧಿಸಿಕೊಂಡು ತಮ್ಮದೇ ಶೈಲಿಯಲ್ಲಿ ವಿಭಿನ್ನ ಸಾಹಿತ್ಯಗಳನ್ನು ಬರೆಯಬೇಕು ಎಂದರು.

ಪ್ರಾಚಾರ್ಯರಾದ ಸಿಬಿಲ್ ನೀಲೂಗಲ್ ಮಾತನಾಡುತ್ತಾ, ಕನ್ನಡ ಭಾಷೆ ಬಹಳ ಸುಮಧುರವಾದ್ದು. ಕನ್ನಡ ಸಂಸ್ಕೃತಿಯನ್ನು ಬೆಳೆಸಲು ದಿನನಿತ್ಯ ಕನ್ನಡ ಸಾಹಿತಿಗಳ ಕೃತಿಗಳನ್ನು ಓದಬೇಕು. ಭಾಷೆಯ ಕುರಿತಾದ ಇತಿಹಾಸವನ್ನು ಓದಿದರೆ ಇತಿಹಾಸ ಬರೆಯಲು ಸಾಧ್ಯ ಎಂದರು.

ವಿದ್ಯಾರ್ಥಿನಿಯರಾದ ಕಾವ್ಯ ಹಾಗೂ ರಾಜೇಶ್ವರಿ ಮಾತನಾಡಿದರು. ಬ್ಲೆಸನ್ ಹಾಗೂ ದೆಬೋರ ಕಾರ್ಯಕ್ರಮ ನಿರೂಪಿಸಿದರು. ಜಯಶ್ರೀ ಪುರದ, ಪೂರ್ವಿತಾ ಶಂಭು ಪುರದ ಉಪಸ್ಥಿತರಿದ್ದರು. ನೀಲಮ್ಮ ಪಾಟೀಲ ವಂದಿಸಿದರು.



ಗದುಗಿನ ಮಹೇಶ್ ಪಬ್ಲಿಕ್ ಸ್ಕೂಲ್‌ನಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಪ್ರೊ. ಮಹಾಂತೇಶ ಬಾತಖಾನಿ, ಕರ್ನಾಟಕದ ಏಕೀಕರಣದದಲ್ಲಿ ಗದಗ ಜಿಲ್ಲೆಯ ಕೊಡುಗೆಗಳ ಬಗ್ಗೆ ಮಾತನಾಡಿದರು. ಸಮಾರಂಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯೆ ವಿಜಯಲಕ್ಷ್ಮೀ, ಸಹ ಶಿಕ್ಷಕರಾದ ಸವಿತಾ, ಲಲಿತಾ, ಸಿರಿಗೌರಿ, ಐಶ್ವರ್ಯ, ಶಾರದಾ, ತ್ರಿವೇಣಿ, ಸವಿತಾ ಗೌಡರ್ ಕನ್ನಡ ರಾಜ್ಯೋತ್ಸವದ ಕುರಿತು ಮಾತನಾಡಿದರು. ಸಹ ಶಿಕ್ಷಕರಾದ ಭಾಗ್ಯಶ್ರೀ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಸಚಿನ್ ಕೋಡೆ ವಂದಿಸಿದರು.

### 69ನೇ ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯಲ್ಲಿ ಸಾಧಕರಿಗೆ ಸನ್ಮಾನ

# ಗಮನ ಸೆಳೆದ ಪಥ ಸಂಚಲನ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು 69ನೇ ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯ ಅಂಗವಾಗಿ ಸಾರ್ವಜನಿಕ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ವಿವಿಧ ದಳಗಳ ವೀಕ್ಷಣೆ ಮಾಡಿದರು.

ಆಕರ್ಷಕ ಪಥಸಂಚಲನದ ನೇತೃತ್ವವನ್ನು ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಪರೇಡ ಕಮಾಂಡರ್ ವಿದ್ಯಾನಂದ ನಾಯಕ ವಹಿಸಿದ್ದರು. ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ನೇತೃತ್ವವನ್ನು ಆರ್.ಎಸ್.ಐ ಸತೀಶ ಠಕ್ಕಳಕ್ಕಿ ವಹಿಸಿದ್ದರು. ನಾಗರಿಕ ಪೊಲೀಸ್ ಪಡೆಯ ನೇತೃತ್ವವನ್ನು ಗದಗ ಗ್ರಾಮೀಣ ಘಟಕದ ಪಿಎಸ್‌ಐ ಕಿರಣ ಕೋಣನಕೇರಿ, ಗೃಹ ರಕ್ಷಕ ದಳದ ನೇತೃತ್ವವನ್ನು ಎಂ.ಎನ್. ವಸ್ತ್ರದ, ಅಗ್ನಿಶಾಮಕ ಪಡೆಯ ನೇತೃತ್ವವನ್ನು ಲೋಕೇಶ ಎಫ್.ಎಸ್.ಓ, ಅಬಕಾರಿ ದಳದ ನೇತೃತ್ವವನ್ನು ವಿಜಯಲಕ್ಷ್ಮೀ, ಅರಣ್ಯ ರಕ್ಷಕ ಪಡೆಯ ನೇತೃತ್ವವನ್ನು ಡೆಪ್ಯೂಟಿ ಆರ್.ಎಫ್.ಓ ಸಚಿನ ಬಿಸನಳ್ಳಿ, 38 ಕೆಎಆರ್ ಬಟಾಲಿನ್ ಗದಗನ ನೇತೃತ್ವವನ್ನು ನೀಲಮ್ಮ ಕರಡಿ, ನಗರದ ಎಸ್.ಎಂ. ಕೃಷ್ಣಾ ನಗರದ ಸರ್ಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆಯ ನೇತೃತ್ವವನ್ನು ಅಂಜನಾ, ಬೆಟಗೇರಿಯ ಸೇಂಟ್ ಜಾನ್ ಪ್ರೌಢಶಾಲೆಯ ನೇತೃತ್ವವನ್ನು ಕುಮಾರ್ ಸೋಮಶೇಖರ, ವಿ.ಡಿ.ಎಸ್.ಟಿ.ಸಿ. ಬಾಲಕಿಯರ ಪ್ರೌಢಶಾಲೆಯ ನೇತೃತ್ವವನ್ನು ಗೌರಿ, ಎಸ್.ಎಂ.



ಕೃಷ್ಣಾ ನಗರದ ಸರ್ಕಾರಿ ಹಿರಿಯ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಯ ನೇತೃತ್ವವನ್ನು ಸ್ನೇಹಾ, 38 ಕೆಎಆರ್ ಬಟಾಲಿನ್ ಎನ್.ಸಿ.ಸಿ ಸೀನಿಯರ್ಸ್ ಗದಗನ ನೇತೃತ್ವವನ್ನು ಗುರುಪ್ರಸಾದ, ಕೆ.ಎಲ್.ಇ ಪ್ರೌಢಶಾಲೆ ನೇತೃತ್ವವನ್ನು ಜುಬೇರಿಯಾ ವಹಿಸಿದ್ದರು. ಪಥ ಸಂಚಲನದಲ್ಲಿ ಪಾಲ್ಗೊಂಡು ಉತ್ತಮ ಪ್ರದರ್ಶನ ನೀಡಿದ ತಂಡಗಳಿಗೆ ಸಚಿವರು ಸನ್ಮಾನಿಸಿದರು.

69ನೇ ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಗುರುತಿಸಿ ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸೇರಿದಂತೆ ಇತರೆ ಗಣ್ಯರು ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡರು.

ಮಾಧ್ಯಮ ವಿಭಾಗ : ಕನ್ನಡ ನಾಡು ನುಡಿ ಕುರಿತು ಉತ್ತಮ ವರದಿಗಳನ್ನು ಮಾಡಿ ತಮ್ಮದೇ ಸೇವೆ ಸಲ್ಲಿಸಿದ್ದಕ್ಕಾಗಿ ಗದಗ ಸಂಯುಕ್ತ ಕರ್ನಾಟಕ ದಿನಪತ್ರಿಕೆ ವರದಿಗಾರ ಸೂರ್ಯನಾರಾಯಣ ನರಗುಂದಕರ, ಹೊಸದಿಗಂತ ದಿನಪತ್ರಿಕೆ ವರದಿಗಾರ ವೆಂಕಟೇಶ ಇಮ್ರಾಪೂರ, ಸುವರ್ಣ ಟಿ.ವಿ ವರದಿಗಾರ ಗಿರೀಶ ಕಮ್ಮಾರ, ಮುಳಗುಂದ ವಿಜಯವಾಣಿ ವರದಿಗಾರ ವಿ.ಡಿ. ಕಣವಿ, ಮುಂಡರಗಿ ಪ್ರಜಾವಾಣಿ ವರದಿಗಾರ ಕಾಶಿನಾಥ ಬಿಳಿಮಗ್ಗದ, ಶಿರಹಟ್ಟಿ ಕಿತ್ತೂರು ಕರ್ನಾಟಕ ವರದಿಗಾರ ಎ.ಎಚ್. ಖಾಜಿ, ಗದಗ ಉದಯವಾಣಿ ವರದಿಗಾರ ಅರುಣಕುಮಾರ ಹೀರೆಮಠ, ಕಿತ್ತೂರುಕರ್ನಾಟಕ ದಿನಪತ್ರಿಕೆ ಛಾಯಗ್ರಾಹಕ ಎಚ್ಚರಪ್ಪ ಮಹೇಂದ್ರಕರ ಇವರ ಸೇವೆಯನ್ನು ಗುರುತಿಸಿ ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು.

ಸಮಾಜ ಸೇವೆ ಹಾಗೂ ಸಹಕಾರ ಕ್ಷೇತ್ರ : ಕುರ್ತಕೋಟಿಯ ಅಪ್ಪಣ್ಣ ಇನಾಮತಿ, ಗದಗಿನ ಚಂದ್ರಗೌಡ ಮರಿಯಪ್ಪಗೌಡರ, ವಿರೇಂದ್ರ ಹೂಲಿ, ಕುರ್ತಕೋಟಿ ಅಲ್ಲಾಭಕ್ಷ ತಹಸೀಲದಾರ, ಗದಗನ ಬಾಲಚಂದ್ರ ಭರಮಗೌಡರ, ರಾಜೀವಗಾಂಧಿ ನಗರದ ಉಮೇಶ ಮಲ್ಲಪ್ಪ ಹಡಪದ ಅವರುಗಳನ್ನು ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು.

ಶಿಕ್ಷಣ ಮತ್ತು ಕ್ರೀಡಾ ವಿಭಾಗ: ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ್ದಕ್ಕಾಗಿ ಕೆಂಚನಗೌಡರ, ಗಾಂಧಿ ಜಯಂತಿ ಅಂಗವಾಗಿ ಜರುಗಿದ ಪ್ರಬಂಧ ಸ್ಪರ್ಧೆಯಲ್ಲಿ ಪ.ಪೂ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಗದಗ ಸ.ಪ.ಪೂ ಕಾಲೇಜಿನ ವಿಜಯಕುಮಾರ ದೊಡ್ಡಮನಿ, ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆಗೈದ ಪ್ರಣತಿ ಆರ್.ಗಡಾದ, ಕ್ರೀಡಾ ಕ್ಷೇತ್ರದಲ್ಲಿ ಸಾಧನೆಗೈದ ಹರೀಶ್ ಮುಟಗಾರ್, ಕುಸ್ತಿ ಕ್ರೀಡೆಯಲ್ಲಿ ಸಾಧನೆಗೈದ ವೈಷ್ಣವಿ ಇಮ್ಮಡಿಯವರ ಹಾಗೂ ವರಲಕ್ಷ್ಮಿ ಕದಡಿ, ಸಮಾಜಕಿಕ ಕ್ಷೇತ್ರದಲ್ಲಿ ಪ್ರಾಮಾಣಿಕ ಸೇವೆಗೈದ ಅರ್ಮಾನ್ ತಾಜುದ್ದೀನ್ ವಡಗೇರ ಅವರನ್ನು ಸನ್ಮಾನಿಸಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮ: ವಿವಿಧ ಶಾಲಾ ಮಕ್ಕಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ನಗರದ ಸಿಡಿಓ ಜೈನ್ ಪ್ರೌಢಶಾಲೆ ಪ್ರಥಮ, ಲೋಯಲಾ ಪ್ರಾಥಮಿಕ ಶಾಲೆ ದ್ವಿತೀಯ, ಸೇಂಟ್ ಜಾನ್ ಪ್ರಾಥಮಿಕ ಶಾಲೆ ತೃತೀಯ ಬಹುಮಾನ ಪಡೆಯಿತು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

2024ನೇ ಸಾಲಿನ ಕವಿ ಕುಮಾರವ್ಯಾಸ ಪ್ರಶಸ್ತಿ ಪಡೆದಿದ್ದಕ್ಕಾಗಿ ಸಿದ್ದೇಶ್ವರ ಶಾಸ್ತ್ರೀ ತೆಲ್ಲೂರು, ಸುಮಾರು 25 ವರ್ಷಗಳಿಂದ ಶಿಲ್ಪಕಲಾ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ರೋಣದ ಶಂಕ್ರಪ್ಪ ದೇವಪ್ಪ ಬಡಿಗೇರ, 2023-24ನೇ ಸಾಲಿನ ಕಿತ್ತೂರು ರಾಣಿ ಚೆನ್ನಮ್ಮ ರಾಜ್ಯಮಟ್ಟದ ಪ್ರಶಸ್ತಿ ಪಡೆದ ವಿ.ವಿ. ಹಿರೇಮಠ, ಸುಮಾರು 30 ವರ್ಷಗಳಿಂದ ಸಂಗೀತ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ್ದಕ್ಕಾಗಿ ಉಷಾ ಕಾರಂತ, ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿದ್ದಸಿದ್ದಕ್ಕಾಗಿ ಡಾ. ಎಸ್.ಸಿ. ಚವಡಿ ಅವರನ್ನು ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು.



## ಸ್ತಬ್ಧ ಚಿತ್ರ

ಶಿಕ್ಷಣ ಇಲಾಖೆ, ಜಿಲ್ಲಾ ಪಂಚಾಯತ, ಕೆಎಸ್‌ಆರ್‌ಟಿಸಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ-ಬೆಟಗೇರಿ ನಗರಸಭೆ, ತೋಟಗಾರಿಕೆ ಇಲಾಖೆ ಹಾಗೂ ಕೃಷಿ ಇಲಾಖೆಗಳಿಂದ ವಿವಿಧ ಯೋಜನೆಗಳ ಸ್ತಬ್ಧ ಚಿತ್ರಗಳನ್ನು ರೂಪಿಸಿ ಪ್ರದರ್ಶಿಸಲಾಯಿತು. ಇವುಗಳಲ್ಲಿ ಎನಡಬ್ಲ್ಯೂಕೆಎಸ್‌ಆರ್‌ಟಿಸಿ ನಿರ್ಮಿಸಿದ ಸಬರಮತಿ ಆಶ್ರಮದ ಸ್ತಬ್ಧ ಚಿತ್ರಕ್ಕೆ ಪ್ರಥಮ ಬಹುಮಾನ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ದ್ವಿತೀಯ ಬಹುಮಾನ ಹಾಗೂ ಶಿಕ್ಷಣ ಇಲಾಖೆ ನಿರ್ಮಿಸಿದ ಸ್ತಬ್ಧ ಚಿತ್ರಗಳು ತೃತೀಯ ಬಹುಮಾನ ಪಡೆದವು.

# ‘ಕನ್ನಡ’ ಅನ್ನ ನೀಡುವ ಅಕ್ಷಯ ಪಾತ್ರೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕನ್ನಡ ಕೇವಲ ಭಾಷೆಯಲ್ಲ, ಅದೊಂದು ಅನ್ನ ನೀಡುವ ಅಕ್ಷಯ ಪಾತ್ರೆಯಾಗಿದೆ ಎಂದು ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಚೇರಮನ್ ಹಾಗೂ ವಕೀಲರಾದ ಎಂ.ಎಚ್. ಕೋಲಕಾರ ಹೇಳಿದರು.

ನಗರದ ಅಂಜುಮನ್ ಇಸ್ಲಾಂ ಕಮಿಟಿಯ ಅಂಜುಮನ್ ಕಾನ್ವೆಂಟ್ ಸ್ಕೂಲ್‌ನಲ್ಲಿ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣ ನೇರವೇರಿಸಿ ಅವರು ಮಾತನಾಡಿದರು.

ಪ್ರಾಚೀನ ಕಾಲದಿಂದಲೂ ಕನ್ನಡವನ್ನು ಉಳಿಸಿ, ಬೆಳೆಸಲು ಕವಿಗಳು, ಸಂತರು, ಶರಣರು, ಕನ್ನಡ ಪರ ಸಂಘಟನೆಯವರು, ಸರ್ಕಾರ ಎಲ್ಲರೂ ಶ್ರಮಿಸಿದ್ದಾರೆ. ಕನ್ನಡದ ಬಗೆಗೆ ಅಪಾರ ಅಭಿಮಾನ, ಪ್ರೀತಿ, ಕಾಳಜಿಯಿಂದ ಕನ್ನಡವನ್ನ ಎಲ್ಲಾ ಕಡೆ ಬೆಳೆಸಬೇಕು. ಯುವ ಜನಾಂಗ, ವಿದ್ಯಾರ್ಥಿ ಸಮೂಹ ಆ ಕಾರ್ಯದಲ್ಲಿ ಮುಂಚೂಣಿಯಲ್ಲಿರಬೇಕಿದೆ ಎಂದರು.



ಅಂಜುಮನ್ ಇಸ್ಲಾಂ ಕಮಿಟಿ ನಿರ್ದೇಶಕ ದಾವಲಸಾಬ ತಾಳಿಕೋಟಿ ಮಾತನಾಡಿ, ಸುಮಾರು 2,500 ವರ್ಷಗಳ ಇತಿಹಾಸ ಹೊಂದಿರುವ ಕನ್ನಡವು ಎಲ್ಲ ಭಾಷೆಗಳ ತಾಯಿ ಬೇರು. ವಿದ್ಯಾರ್ಥಿಗಳು ತಾಯಿ ನುಡಿ, ಕನ್ನಡ ಭಾಷೆಯನ್ನು ಎಂದಿಗೂ ಮರೆಯಬಾರದು. ಕನ್ನಡ ಭಾಷೆಯ ಶ್ರೀಮಂತಿಕೆಯನ್ನು ಹೆಚ್ಚಿಸುವ ಕೆಲಸ ಕನ್ನಡಿಗರಾದ ನಾವೆಲ್ಲರೂ ಮಾಡಬೇಕು ಎಂದರು.

ಈ ವೇಳೆ ಅಂಜುಮನ್ ಇಸ್ಲಾಂ ಕಮಿಟಿ ಕಾರ್ಯದರ್ಶಿ ಫಯಾಜ್ ತೋಟದ, ನಿರ್ದೇಶಕ ನಾಸೀರ ಸುರಪುರ, ಮಾಸುಮಲಿ ಮದಗಾರ, ಮುಖ್ಯ ಶಿಕ್ಷಕಿ ಮಾಜನಬಿ ಹಣಗಿ, ಫಾತೀಮ ಕಡ್ಲಿಮಟ್ಟಿ ಇದ್ದರು.

# ಹಲ್ಮಿಡಿ ಶಾಸನದ ಪ್ರತಿಕೃತಿಯ ಅನಾವರಣ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಹೆಸರಾಯಿತು ಕರ್ನಾಟಕ-ಉಸಿರಾಗಲಿ ಕನ್ನಡ ಅಭಿಯಾನದಡಿ, ಶುಕ್ರವಾರ ಬೆಳಿಗ್ಗೆ ಕನ್ನಡದ ಮೊದಲ ಶಾಸನವಾದ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಕಾರ್ಮಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದ ಆವರಣದಲ್ಲಿ ಅನಾವರಣಗೊಳಿಸಿದರು.

ಕಾರ್ಯಕ್ರಮದಲ್ಲಿ ಆಲೂರು ವೆಂಕಟರಾವ್ ಟ್ರಸ್ಟ್ ಅಧ್ಯಕ್ಷ ಪ್ರೊ. ಪ್ರಮೋದ ಗಾಯಿ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಡಾ. ಎಂ.ಎಂ. ಕಲಬುರ್ಗಿ ಟ್ರಸ್ಟ್ ಅಧ್ಯಕ್ಷ ಪ್ರೊ. ವೀರಣ್ಣ ರಾಜೂರ, ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ., ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಟ್ರಸ್ಟ್ ಸದಸ್ಯ ದೀಪಕ ಆಲೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು, ಗಣ್ಯರು, ಹಿರಿಯ ಅಧಿಕಾರಿ ಸಿಬ್ಬಂದಿಗಳು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ‘ವಚನ ದರ್ಶನ’ ನಿಷೇಧಕ್ಕೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಪ್ರಕಟಗೊಂಡ ವಿವಾದಾತ್ಮಕ ‘ವಚನ ದರ್ಶನ’ ಎಂಬ ಪುಸ್ತಕವು ಬಸವಾದಿ ಶಿವಶರಣರ ಆಶಯಗಳಿಗೆ, ವಚನ ಚಳುವಳಿಗೆ, ಶರಣರ ಕ್ರಾಂತಿಗಳಿಗೆ, ವಚನಸಾಹಿತ್ಯದ ಮೂಲ ಚಿಂತನೆಗಳಿಗೆ ಧಕ್ಕೆ ತರುವಂತಹ ವಿಚಾರಗಳುಳ್ಳ ಲೇಖನಗಳ ಸಂಗ್ರಹವಾಗಿದೆ. ಬಸವಾದಿ ಶರಣರ ಪರಂಪರೆಗೆ ಅಪಚಾರವೆಸಗುವ, ಉದ್ದೇಶಪೂರ್ವಕವಾಗಿ ಸದರಿ ಕೃತಿಯನ್ನು ಬರೆಯಲಾಗಿದೆ. ಆದ್ದರಿಂದ ಪ್ರಸ್ತುತ ಕೃತಿಯನ್ನು ಕೂಡಲೇ ನಿಷೇಧಿಸಬೇಕೆಂದು ಬಸವಪರ ಸಂಘಟನೆಗಳು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿಯನ್ನು ಸಲ್ಲಿಸಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಕೆ.ಎಸ್. ಚೆಟ್ಟಿ, ಗದಗ ಬಸವ ಕೇಂದ್ರದ ಕಾರ್ಯದರ್ಶಿ ಎಸ್.ಎಂ. ಕವಳಿಕಾಯಿ, ಗದಗ ಬಸವದಳದ ಅಧ್ಯಕ್ಷ ವಿ.ಕೆ. ಕರೆಗೌಡರ, ಎನ್.ಎಚ್. ಹಿರೆಸಕ್ಕರಗೌಡರ, ಎಸ್.ಎನ್. ಹಕಾರಿ, ಶಿವನಗೌಡ ಗೌಡರ, ಲಿಂಗಾಯತ ಪ್ರಗತಿಶೀಲ ಸಂಘದ ಮಾಜಿ ಅಧ್ಯಕ್ಷ ಶೇಖಣ್ಣ ಕಳಸಾಪೂರಶೆಟ್ರ, ಸಿದ್ದು ಅಂಗಡಿ, ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಕಾಶ್ ಅಸುಂಡಿ ಮುಂತಾದ ಬಸವಪರ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿ ಮನವಿಯನ್ನು ಅರ್ಪಿಸಿದರು.

ಇದೇ ವಿಚಾರವಾಗಿ ಶಿವಾನಂದ ಮಠಕ್ಕೆ ಭೇಟಿ ನೀಡಿ, ವಚನ ದರ್ಶನ ಪುಸ್ತಕದ ಕುರಿತು ವಿವರವಾದ ಮನವಿಯನ್ನು ಪೂಜ್ಯ ಶ್ರೀ ಜಗದ್ಗುರುಗಳವರಿಗೆ ಸಲ್ಲಿಸಲಾಯಿತು.

### ಕೆಎಸ್‌ಆರ್‌ಟಿಸಿ ಚಾಲಕ ಲಕ್ಷ್ಮಣನ ಕನ್ನಡ ಪ್ರೇಮ: ಸ್ವಂತ ಖರ್ಚಿನಲ್ಲಿ ಬಸ್‌ಗೆ ವಿಶೇಷ ಅಲಂಕಾರ

# ರಾಜ್ಯೋತ್ಸವಕ್ಕೆ ಸಿಂಗಾರಗೊಂಡ ಬಸ್

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇದೀಗ ಎಲ್ಲೆಡೆ ಕನ್ನಡ ರಾಜ್ಯೋತ್ಸವದ ಗುಂಗು. ನವೆಂಬರ್ ತಿಂಗಳಿನಲ್ಲಿ ರಾಜ್ಯೋತ್ಸವವನ್ನು ಒಂದು ದಿನದ ಮಟ್ಟಿಗೆ ಆಚರಿಸಿ ಅದನ್ನು ಮರೆತುಬಿಡುವವರೇ ಅಧಿಕವಾಗಿರುವಾಗ ನಿತ್ಯ ನೂರಾರು ಪ್ರಯಾಣಿಕರನ್ನು ಹೊತ್ತು ಸಾಗಿಸುವ ಸಾರಿಗೆ ನಿಗಮದ ಲಕ್ಷ್ಮೇಶ್ವರದ ಬಸ್ ಚಾಲಕ ಎಸ್.ಪಿ. ಲಕ್ಷ್ಮಣ ಅವರ ಕನ್ನಡ ಪ್ರೇಮಕ್ಕೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಕಳೆದ 26 ವರ್ಷಗಳಿಂದ ಪಟ್ಟಣದ ಸಾರಿಗೆ ಘಟಕದಲ್ಲಿ ಸೇವೆ ಸಲ್ಲಿಸುತ್ತಿರುವ ಚಾಲಕ ಲಕ್ಷ್ಮಣ ಸಮೀಪದ ಬಾಲೇಹೊಸೂರು ಗ್ರಾಮದವರಾಗಿದ್ದು, ಪಕ್ಕಾ ಕನ್ನಡಾಭಿಮಾನಿಯಾಗಿದ್ದಾರೆ. ನವೆಂಬರ್ ತಿಂಗಳ ಮೊದಲ ದಿನ ಇವರು ಬಸ್‌ಗೆ ಮಾಡುವ ಅಲಂಕಾರ ಎಲ್ಲರನ್ನು ಆಕರ್ಷಿಸುವಂತಿರುತ್ತದೆ. ಕಳೆದ 26 ವರ್ಷಗಳಿಂದಲೂ ಕನ್ನಡ ರಾಜ್ಯೋತ್ಸವ ಬಂತೆಂದರೆ ಸ್ವಂತ ಹಣ ಖರ್ಚು ಮಾಡಿ ಬಸ್ ಸಿಂಗಾರ ಮಾಡಿ ಭುವನೇಶ್ವರಿಗೆ ಪೂಜೆ ಸಲ್ಲಿಸಿ ಸಿಹಿ ಹಂಚುತ್ತಾ ಎಲ್ಲರಲ್ಲೂ ಕನ್ನಡ ಪ್ರೇಮ ಬೆಳೆಸುತ್ತಿದ್ದಾರೆ.



ಹಾಗೆಂದು ಲಕ್ಷ್ಮಣ ಇಲ್ಲಿಯವರೆಗೆ ಯಾವುದೇ ಪ್ರಚಾರ ಬಯಸಿಲ್ಲ. ಕಳೆದ 26 ವರ್ಷಗಳಿಂದ ಅಪಘಾತ ರಹಿತ ಚಾಲನೆ ಮಾಡಿರುವದು ಇವರ ಶ್ರೇಷ್ಠ ಕಾರ್ಯಗಳಲ್ಲಿ ಒಂದಾಗಿದ್ದು, ಅಪಘಾತರಹಿತ ಚಾಲನೆಗಾಗಿ 2016ರಲ್ಲಿ ಮುಖ್ಯಮಂತ್ರಿಗಳ ಚಿನ್ನದ ಪದಕ ಹಾಗೂ ಗದಗ ಜಿಲ್ಲೆಯಲ್ಲಿ ಉತ್ತಮ ಚಾಲಕನಾಗಿ ಬೆಳ್ಳಿ ಪದಕ ಪಡೆದಿದ್ದಾರೆ. ಸಾರಿಗೆ ಇಲಾಖೆಯಲ್ಲಿ ಹಲವಾರು ಸಿಬ್ಬಂದಿಗಳು ಕನ್ನಡ ರಾಜ್ಯೋತ್ಸವದ ನಿಮಿತ್ತ ಹತ್ತು ಹಲವಾರು ಕಾರ್ಯಕ್ರಮಗಳನ್ನು ಸದ್ದಿಲ್ಲದೆ ಮಾಡುತ್ತಿದ್ದು, ಅದರಲ್ಲಿ ಲಕ್ಷ್ಮಣ ಕೂಡ ಓರ್ವರಾಗಿದ್ದಾರೆ.

ಲಕ್ಷ್ಮಣ ಅವರು ಚಾಲನೆ ಮಾಡುವ ಬಸ್ ಶುಕ್ರವಾರ ನವೆಂಬರ್ 1ರಂದು ಸಂಪೂರ್ಣವಾಗಿ ಕನ್ನಡಮಯವಾಗಿತ್ತು. ಕೆಂಪು-ಹಳದಿ ಬಲೂನ್, ರಿಬ್ಬನ್, ಬಾಳೆಕಂಬ ಸೇರಿದಂತೆ ತಳಿರು-ತೋರಣಗಳಿಂದ ಸಿಂಗರಿಸಿ ಭುವನೇಶ್ವರಿ ದೇವಿಯ ಭಾವಚಿತ್ರದೊಂದಿಗೆ ಸಿದ್ಧವಾಗಿ ನಿಂತಿತ್ತು. ಅದರಂತೆ ಚಾಲಕರಾದ ಎನ್.ಜಿ. ಬೇನಾಳ ಸಹ ತಮ್ಮ ವಾಹನವನ್ನು ಸಿಂಗರಿಸಿದ್ದು, ಬಸ್‌ನಲ್ಲಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ, ಕನ್ನಡ ಕವಿಗಳ, ಸಾಹಿತಿಗಳ ಭಾವಚಿತ್ರಗಳಿಂದ ಸಿಂಗರಿಸಿದ್ದರು.

ಬಸ್ ನಿಲ್ದಾಣದಲ್ಲಿ ಬಸ್ ನೋಡಲು ಜನರು ಕುತೂಹಲದಿಂದ ಆಗಮಿಸಿ ಚಾಲಕ ಲಕ್ಷ್ಮಣ ಅವರೊಂದಿಗೆ ಕನ್ನಡ ತೇರಾಗಿ ಮಾರ್ಪಟ್ಟಿರುವ ಬಸ್‌ನ ಎದುರಿನಲ್ಲಿ ನಿಂತು ಪೋಟೋ ತೆಗೆಸಿಕೊಳ್ಳುತ್ತಿರುವದು ಕಂಡು ಬಂದಿತು. ಈ ಸಂದರ್ಭದಲ್ಲಿ ವಿಜಯ ಹತ್ತಿಕಾಳ, ಎಸ್.ಎಫ್. ಆದಿ, ಹರೀಶ ಲಕ್ಷ್ಮೇಶ್ವರ, ಸುರೇಶ ಹಟ್ಟಿ, ಪ್ರಕಾಶ ಕೊಂಚಿಗೇರಿಮಠ, ಲೋಕೇಶ ಸುತಾರ ಮುಂತಾದವರು ಎಸ್.ಪಿ. ಲಕ್ಷ್ಮಣ ಮತ್ತು ಬೇನಾಳ ಅವರನ್ನು ಸನ್ಮಾನಿಸಿದರು.

ಕನ್ನಡ ರಾಜ್ಯೋತ್ಸವ ಆಚರಣೆಯನ್ನು ತಮ್ಮ ಸ್ವಂತ ದುಡ್ಡಿನಲ್ಲಿ 25-26 ವರ್ಷಗಳಿಂದ ಪ್ರಾಮಾಣಿಕವಾಗಿ ಮಾಡಿಕೊಂಡು ಬಂದಿರುವ ಲಕ್ಷ್ಮಣ ಅವರ ಕಾರ್ಯ ಎಲ್ಲರಿಗೂ ಮಾದರಿಯಾಗಿದೆ. ಇಲಾಖೆಯಲ್ಲಿ ಇಂತಹ ಇನ್ನೂ ಅನೇಕರಿದ್ದು, ಅವರನ್ನು ಗುರುತಿಸಿ ಗೌರವಿಸುವ ಕಾರ್ಯ ಮಾಡಲಿ

**- ಬಸವರಾಜ ಹಿರೇಮನಿ.**
**ಸಂಗೊಳ್ಳಿ ರಾಯಣ್ಣ ವೇದಿಕೆ ಜಿಲ್ಲಾಧ್ಯಕ್ಷ.**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka